ವಿಜಯಪುರ | ಸಂಪುಟ 04 | ಸಂಚಿಕೆ 144 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಬುಧವಾರ, ಜುಲೈ, 29, 2026

"ಮೇ 2025–26ರ ಅವಧಿಯಲ್ಲಿ ನಿಗದಿತ ಪ್ರಮಾಣಕ್ಕಿಂತ ಹೆಚ್ಚು ಕಾವೇರಿ ನೀರನ್ನು ತಮಿಳುನಾಡಿಗೆ ಹರಿಸಿ, ಕಾಂಗ್ರೆಸ್ ಸರ್ಕಾರ ರಾಜ್ಯದ ಹಿತಾಸಕ್ತಿಗೆ ದ್ರೋಹ ಮಾಡಿದೆ. ಈ ಹೆಚ್ಚುವರಿ ನೀರಿನ ಬಿಡುಗಡೆ ಕಾವೇರಿ ಜಲಾನಯನ ಪ್ರದೇಶದ ರೈತರ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತದೆ."



■ ಆರ್. ಅಶೋಕ್
ವಿಧಾನಸಭೆ ಪ್ರತಿಪಕ್ಷದ ನಾಯಕರು

## ಲಂಚ ಸ್ವೀಕಾರ: ಲೋಕಾ ಬಲೆಗೆ ಖಜಾನಾಧಿಕಾರಿ & ಸಿಬ್ಬಂದಿ

■ ಉದಯರಶ್ಮಿ ದಿನಪತ್ರಿಕೆ



ಬಾಗಲಕೋಟೆ (ಜಮಖಂಡಿ): ನಿವೃತ್ತ ನೌಕರರ ಪಿಂಚಣಿ ಹಾಗೂ ನಿವೃತ್ತಿ ಸೌಲಭ್ಯಗಳ ಕಡತ ವಿಲೇವಾರಿಗಾಗಿ ಲಂಚಕ್ಕೆ ಬೇಡಿಕೆ ಇಟ್ಟಿದ್ದ ಆರೋಪದಡಿ ಜಮಖಂಡಿ ತಾಲೂಕು ಖಜಾನೆ ಕಚೇರಿಯ ತಾಲೂಕು ಖಜಾನಾಧಿಕಾರಿ ಎಸ್. ಎಸ್. ಬಿರಾದಾರ ಹಾಗೂ ಸಿಬ್ಬಂದಿ ವಿನಾಯಕ ಹೊನವಾಡ ಅವರನ್ನು ಲೋಕಾಯುಕ್ತ ಅಧಿಕಾ–ರಿಗಳು ಬಲೆಗೆ ಬೀಳಿಸಿ ವಶಕ್ಕೆ ಪಡೆದರು.


ಚೇತನ ತರತರಿ ನೀಡಿದ ದೂರಿನ ಮೇರೆಗೆ ಲೋಕಾಯುಕ್ತ ಪೊಲೀಸರು ಕಾರ್ಯಾಚರಣೆ ನಡೆಸಿದರು. ದೂರಿನ ಪ್ರಕಾರ, ನಿವೃತ್ತ ನೌಕರರ ಪಿಂಚಣಿ ಮತ್ತು ಇತರೆ ನಿವೃತ್ತಿ ಸೌಲಭ್ಯಗಳನ್ನು ಮಂಜೂರು ಮಾಡಲು ಆರಂಭದಲ್ಲಿ ರೂ. 70 ಸಾವಿರ ಲಂಚಕ್ಕೆ ಬೇಡಿಕೆ ಇಟ್ಟಿದ್ದು, ಬಳಿಕ ರೂ. 40 ಸಾವಿರಕ್ಕೆ ಒಪ್ಪಂದ ಮಾಡಿಕೊಂಡಿದ್ದರು ಎನ್ನಲಾಗಿದೆ.

ಫಿರ್ಯಾದಿದಾರರಿಂದ ರೂ. 40 ಸಾವಿರ ಲಂಚದ ಹಣವನ್ನು ಸ್ವೀಕರಿಸುತ್ತಿದ್ದ ವೇಳೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿ ಇಬ್ಬರನ್ನು ವಶಕ್ಕೆ ಪಡೆದು, ಹಣವನ್ನು ವಶಪಡಿಸಿಕೊಂಡರು. ಬಳಿಕ ಕಚೇರಿಯಲ್ಲಿ ಅಗತ್ಯ ದಾಖಲೆಗಳ ಪರಿಶೀಲನೆ ನಡೆಸಿ ಮುಂದಿನ ಕಾನೂನು ಕ್ರಮ ಕೈಗೊಂಡರು.

ಈ ಕಾರ್ಯಾಚರಣೆ ಲೋಕಾಯುಕ್ತ ಪೊಲೀಸ್ ಅಧಿಕಾರಿಗಳ ನೇತೃತ್ವದಲ್ಲಿ ನಡೆದಿದ್ದು, ಪ್ರಕರಣಕ್ಕೆ ಸಂಬಂಧಿಸಿದಂತೆ ಹೆಚ್ಚಿನ ತನಿಖೆ ಮುಂದುವರಿದಿದೆ.

## ಜು.30ರಿಂದ ಮುಳಸಾವಳಗಿ ಹಜರತ್ ಮತಾಬಷಹೀದ್ ಜಾತ್ರೆ

■ ಉದಯರಶ್ಮಿ ದಿನಪತ್ರಿಕೆ



ದೇವರಹಿಪ್ಪರಗಿ: ಜು.30 ಗುರುವಾರದಿಂದ ಮೂರು ದಿನಗಳ ಕಾಲ ತಾಲ್ಲೂಕಿನ ಮುಳಸಾವಳಗಿ ಗ್ರಾಮದಲ್ಲಿ ಧಾರ್ಮಿಕ, ಸಾಮಾಜಿಕ ರಾಷ್ಟ್ರೀಯ ಭಾವೈಕ್ಯತೆಯ ಸಂಕೇತವಾಗಿರುವ ಹಜರತ್ ಮತಾಬಷಹೀದ ಜಾತ್ರಾ ಮಹೋತ್ಸವ (ಉರುಸು)ನಡೆಯಲಿದೆ.

ದಿನಾಂಕ 30 ರಂದು ಗುರುವಾರ ಜಾತ್ರಾ ಮಹೋತ್ಸವದ ಅಂಗವಾಗಿ ಮುಕ್ತ ಕಬ್ಬಡ್ಡಿ ಪಂದ್ಯಾವಳಿ ಏರ್ಪಡಿಸಲಾಗಿದ್ದು, ಪ್ರಥಮ 20001 ರೂ, 10001 ದ್ವಿತೀಯ,15001 ರೂ. ತೃತೀಯ ಬಹುಮಾನ 10001 ನೀಡಲಾಗುವುದು. ರಾತ್ರಿ ವಿಜಯಪುರ ತಾಲೂಕಿನ ಅಂಕಲಗಿ ಗ್ರಾಮದ ಕಾಸೀಮಪಟೇಲ ಪೊಲೀಸ್ ಪಾಟೀಲ ಇವ–ರಿಂದ ಧಾರ್ಮಿಕ ಕ್ರೀಯಾಚರಣೆಗಳಿಂದ ಸ್ಥಳೀಯ ಸದ್ಭಕ್ತ, ಸರ್ವ ಸಮುದಾಯದೊಡನೆ ಗಂಧೋತ್ಸವ ನಡೆಯಲಿದೆ. ಅಂದೇ ರಾತ್ರಿ ರಂಗು ರಂಗಿನ ಮದ್ದು ಸುಡುವ ಕಾರ್ಯಕ್ರಮ ಜರುಗುವುದು. ರಾತ್ರಿ "ಕರ್ಮದ ಕೂಸಿಗೆ ಧರ್ಮದ ತೊಟ್ಟಿಲು" ಎಂಬ ಸಾಮಾಜಿಕ ನಾಟಕ ಜರುಗಲಿದೆ


ದಿ:31 ಶುಕ್ರವಾರದಂದು ದೀಪೋತ್ಸವ, ನೈವಿಧ್ಯ ಸಮರ್ಪಣೆ ನಂತರ ರಾತ್ರಿ 10 ಘಂಟೆಗೆ ಅಪ್ಪಾಜಿ ಮೆಲೋಡಿಸ್ ಇವರಿಂದ ರಸಮಂಜರಿ ಕಾರ್ಯಕ್ರಮ ನಡೆಯಲಿದೆ.

ದಿ:1 ಶನಿವಾರದಂದು ಬಾಶೀದೀಪೋತ್ಸವ, ಕಾಯಿಕರ್ಪೂರದೊಂದಿಗೆ ಧಾರ್ಮಿಕ ಕಾರ್ಯಕ್ರಮಗಳು ಸಂಪೂರ್ಣಗೊಳ್ಳಲಿವೆ. ಅದೇ ದಿನ ಬೆಳಿಗ್ಗೆ ಭಾರ ಎತ್ತುವ ಸ್ಪರ್ಧೆ, ಇದರಲ್ಲಿ ತೆಕ್ಕೆಬಡಿದು ಚೀಲ ಎತ್ತುವ ಹಾಗೂ ಗುಂಡು ಎತ್ತುವ ಜೊತೆಯಲ್ಲಿ ಸಂಗ್ರಾಣಿ ಕಲ್ಲು ಎತ್ತುವ ಸ್ಪರ್ಧೆಗಳು ಜರುಗುವವು. ಸಂಜೆ ಬೃಹತ್ ಜಂಗೀ ಕುಸ್ತಿಗಳು ನಡೆಯಲಿವೆ. ಸ್ಪರ್ಧೆಯಲ್ಲಿ ಭಾಗವಹಿಸಿ ವಿಜೇತರಾದವರಿಗೆ ಕಮೀಟಿ ವತಿಯಿಂದ ನಗದು ಬಹುಮಾನಗಳನ್ನು ನೀಡಲಾಗುವುದು. ಇದೇದಿನ ರಾತ್ರಿ ಭಕ್ತಾದಿಗಳಿಂದ ದೀಪಾಲಂಕಾರ ಸೇವೆ ನಡೆಯಲಿದೆ. ಜಾತ್ರೆಯ ಅಂಗವಾಗಿ ಸತತ ಮೂರು ದಿನಗಳ ಕಾಲ ಅನ್ನಸಂತರ್ಪಣೆ ನಡೆಯಲಿದೆ.

ಮುಳಸಾವಳಗಿ ಗ್ರಾಮಕ್ಕೆ ದೇವರಹಿಪ್ಪರಗಿ ಇಂಡಿ ಕಡೆಯಿಂದ ವಾಹನಗಳ ಅನುಕೂಲವಿದ್ದು, ಗ್ರಾಮದ ಆಟೋ ಸೇರಿದಂತೆ ಎಲ್ಲ ವಾಹನ ಚಾಲಕರು ಜಾತ್ರಾ ಸಮಯದಲ್ಲಿ ಉಚಿತ ಸೇವೆ ಒದಗಿಸಲಿದ್ದಾರೆ. ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಭಾಗವಹಿಸಿ ಪುನೀತರಾಗಬೇಕೆಂದು ಜಾತ್ರಾ ಸಮಿತಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.

### ಜು.28 ರಿಂದ ನ.20 ರವರೆಗೆ ಕಾಲುವೆಗಳಿಗೆ ನೀರು । 66 ದಿನ ನೀರು, 50 ದಿನ ಬಂದ್ । ವಾರಾಬಂಧಿ ಪದ್ಧತಿ ಜಾರಿ

## ಆಲಮಟ್ಟಿ–ನಾರಾಯಣಪುರದಿಂದ ಕಾಲುವೆಗಳಿಗೆ ನೀರು



■ ಉದಯರಶ್ಮಿ ದಿನಪತ್ರಿಕೆ

ಆಲಮಟ್ಟಿ: ಕೃಷ್ಣಾ ಅಚ್ಚುಕಟ್ಟು ಪ್ರದೇಶದ ಮುಂಗಾರು ಹಂಗಾಮಿನ ನೀರಾವರಿಗಾಗಿ ಆಲಮಟ್ಟಿ ಮತ್ತು ನಾರಾಯಣಪುರ ಜಲಾಶಯಗಳಿಂದ ಜು. 28ರಿಂದ ನ.20ರವರೆಗೆ ಕಾಲುವೆಗಳಿಗೆ ನೀರು ಹ–ರಿಸಲು ನಿರ್ಧರಿಸಲಾಗಿದೆ.

ನೀರಾವರಿ ಸಲಹಾ ಸಮಿತಿ (ಐಸಿಸಿ) ಪೂರ್ಣ ಪ್ರಮಾಣದಲ್ಲಿ ರಚನೆಯಾಗದ ಹಿನ್ನೆಲೆಯಲ್ಲಿ ಜಲಸಂಪನ್ಮೂಲ ಸಚಿವರ ಅನುಮೋದನೆಯ ಮೇರೆಗೆ ಐಸಿಸಿ ಸದಸ್ಯ ಕಾರ್ಯದರ್ಶಿಯೂ ಆಗಿರುವ ಭೀಮರಾಯನಗುಡಿ ಕಾಲುವೆ ವಲಯದ ಮುಖ್ಯ ಎಂಜಿನಿಯರ್ ಅಭಿಮನ್ಯು ಈ ಕುರಿತು ಪ್ರಕಟಣೆ ಹೊರಡಿಸಿದ್ದಾರೆ.

**ಕಾಲುವೆ ಬಂದ್ ಇರುವ ಅವಧಿ - ಒಟ್ಟು 50 ದಿನ**

1. ಆ.11 ರಿಂದ ಆ.20 ರವರೆಗೆ – 10 ದಿನ
2. ಸೆ.4 ರಿಂದ ಸೆ.13 ರವರೆಗೆ – 10 ದಿನ
3. ಸೆ.28 ರಿಂದ ಅ.7 ರವರೆಗೆ – 10 ದಿನ
4. ಅ.22 ರಿಂದ ಅ.31 ರವರೆಗೆ – 10 ದಿನ
5. ನ.11 ರಿಂದ ನ.20 ರವರೆಗೆ – 10 ದಿನ

ಆಲಮಟ್ಟಿಯಲ್ಲಿ 97.27 ಟಿಎಂಸಿ ಮತ್ತು ನಾರಾಯಣಪುರದಲ್ಲಿ 19.32 ಟಿಎಂಸಿ ಸೇರಿ ಒಟ್ಟು 115.59 ಟಿಎಂಸಿ ಅಡಿ ಬಳಕೆಯೋಗ್ಯ ನೀರು ಸಂಗ್ರಹವಿದೆ. ಆಲಮಟ್ಟಿಗೆ 73,461 ಕ್ಯೂಸೆಕ್ ಒಳಹ–ರಿವು ಇದೆ.

**ನೀರು ಬಿಡುವ ದಿನಾಂಕಗಳು – ಒಟ್ಟು 66 ದಿನ**

1. ಜು.28 ರಿಂದ ಆ.10 ರವರೆಗೆ – 14 ದಿನ
2. ಆ.21 ರಿಂದ ಸೆ.3 ರವರೆಗೆ – 14 ದಿನ
3. ಸೆ.14 ರಿಂದ ಸೆ.27 ರವರೆಗೆ – 14 ದಿನ
4. ಅ.8 ರಿಂದ ಅ.21 ರವರೆಗೆ – 14 ದಿನ
5. ನ.1 ರಿಂದ ನ.10 ರವರೆಗೆ – 10 ದಿನ


ಗಮನ: ಆಲಮಟ್ಟಿ ಜಲಾಶಯದ ಒಳಹರಿವು 11,000 ಕ್ಯೂಸೆಕ್‌ಗೂ ಅಧಿಕ ಇದ್ದರೆ ಕಾಲುವೆಗೆ ಯಾವುದೇ ವಾರಾಬಂಧಿ ಇಲ್ಲದೆ ನಿರಂತರ ನೀರು ಹರಿಯಲಿದೆ.

**ನೀರು ಬಿಡುವ ವೇಳಾಪಟ್ಟಿ**

ಜು.28ರಿಂದ ಆ.10ರವರೆಗೆ 14 ದಿನ ನೀರು ಹರಿಸಲಾಗುವುದು. ನಂತರ 10 ದಿನ ಬಂದ್ ಮತ್ತು 14 ದಿನ ನೀರು ಹರಿಸುವ ವಾರಾಬಂಧಿ ಪದ್ಧತಿ ಜಾರಿಯಾಗಲಿದೆ. ಒಟ್ಟು 66 ದಿನ ನೀರು ಹರಿಸಿ, 50 ದಿನ ಕಾಲುವೆಗಳನ್ನು ಬಂದ್ ಇರಿಸಲಾಗುವುದು. ರೈತರ ಒತ್ತಾಯ ಮತ್ತು ಜನಪ್ರತಿನಿಧಿಗಳ ಮನವಿಯ ಹಿನ್ನೆಲೆಯಲ್ಲಿ ಕೈಗೊಂಡಿರುವ ಈ ನಿರ್ಧಾರದಿಂದ ಮುಂಗಾರು ಬೆಳೆಗಳಿಗೆ ನೀರಿನ ಭರವಸೆ ದೊರೆತಂತಾಗಿದೆ.

# ಕೆಪಿಎಸ್‌ಸಿ ಅಕ್ರಮ: ಸಿಐಡಿಗೆ ಪ್ರಕರಣ ಹಸ್ತಾಂತರ!

### ಕರ್ನಾಟಕ ಲೋಕಸೇವಾ ಆಯೋಗದ ಪಶುವೈದ್ಯಾಧಿಕಾರಿಗಳ ನೇಮಕಾತಿಯಲ್ಲಿ ಅಕ್ರಮ । ಗೃಹ ಸಚಿವ ಪ್ರಿಯಾಂಕ್ ಖರ್ಗೆ



ಬೆಂಗಳೂರು: ಕರ್ನಾಟಕ ಲೋಕಸೇವಾ ಆಯೋಗದ (ಕೆಪಿ–ಎಸ್ಸಿ) 400 ಪಶುವೈದ್ಯಾಧಿಕಾರಿಗಳ ನೇಮಕಾತಿಯಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳಿಗೆ ಸಂಬಂಧಿಸಿದಂತೆ ದಾಖಲಾದ ಪ್ರಕರಣಗಳನ್ನು ಸಿಐಡಿ (ಅಪರಾಧ ತನಿಖಾ ದಳ) ತನಿಖೆಗೆ ಹಸ್ತಾಂತರಿಸಲಾಗಿದೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಮಂಗಳವಾರ ತಿಳಿಸಿದರು.

ಈ ಕುರಿತು ಸಮಗ್ರ ತನಿಖೆ ನಡೆಸಲಾಗುವುದು ಹಾಗೂ ತಪ್ಪಿತಸ್ಥರಿಗೆ ಕಾನೂನು ಪ್ರಕಾರ ಶಿಕ್ಷೆ ವಿಧಿಸಲಾಗುವುದು ಎಂದು ಅವರು ಭರವಸೆ ನೀಡಿದ್ದಾರೆ.

ಈ ಕುರಿತು ಅವರು ಸಾಮಾಜಿ–ಕ ಜಾಲತಾಣ ಎಕ್ಸ್ ನಲ್ಲಿ ಮಾಹಿತಿ ಹಂಚಿಕೊಂಡಿದ್ದು, "ನ್ಯಾಯಯುತ, ನಿಷ್ಪಕ್ಷಪಾತ ಮತ್ತು ಸಮಗ್ರ ತನಿಖೆಯನ್ನು ಖಚಿತಪಡಿಸುವ ದೃಷ್ಟಿಯಿಂದ ಕರ್ನಾಟಕ ಸಾರ್ವಜನಿಕ ಪರೀಕ್ಷೆ (ನೇಮಕಾತಿಯಲ್ಲಿ ಭ್ರಷ್ಟಾಚಾರ ಮತ್ತು ಅಕ್ರಮ ಮಾರ್ಗಗಳ ತಡೆಗಟ್ಟುವಿಕೆ ಕ್ರಮಗಳು) ಕಾಯ್ದೆ–2023'ರ ಸೆಕ್ಷನ್ 10ರ ಅಡಿಯಲ್ಲಿ ಬೆಂಗಳೂರು ನಗರದ ವಿಧಾನಸೌಧ ಪೊಲೀಸ್ ಠಾಣೆಯಲ್ಲಿ ಕೆಪಿ–ಎಸ್‌ಸಿ ವಿರುದ್ಧ ದಾಖಲಿಸಲಾದ ಎರಡು ಪ್ರಕರಣಗಳನ್ನು ಮುಂದಿನ ತನಿಖೆಗಾಗಿ ಸಿಐಡಿಗೆ ವರ್ಗಾಯಿಸಲಾಗಿದೆ ಎಂದು ತಿಳಿಸಿದ್ದಾರೆ.


ಸಾರ್ವಜನಿಕ ನೇಮಕಾತಿ ಪ್ರಕ್ರಿಯೆಯ ಘನತೆ ಮತ್ತು ವಿಶ್ವಾಸಾರ್ಹತೆಯನ್ನು ಎತ್ತಿಹಿಡಿಯಲು ಸರ್ಕಾರ ಬದ್ಧವಾಗಿದೆ. ಪರೀಕ್ಷೆಗಳು ಅಥವಾ ನೇಮಕಾತಿಯಲ್ಲಿ ಭ್ರಷ್ಟಾಚಾರ, ದುರ್ನಡತೆ ಅಥವಾ ಅಕ್ರಮ ಮಾರ್ಗಗಳ ಕುರಿತ ಯಾವುದೇ ಆರೋಪದ ಬಗ್ಗೆ ನಿರ್ಭಯವಾಗಿ ಮತ್ತು ಪಕ್ಷಪಾತವಿಲ್ಲದೆ ಸಮಗ್ರ ತನಿಖೆ ನಡೆಸಲಾಗುವುದು. ತಪ್ಪಿತಸ್ಥರು ಎಷ್ಟೇ ಉನ್ನತ ಹುದ್ದೆಯಲ್ಲಿದ್ದರೂ, ಅವರ ವಿರುದ್ಧ ಕಾನೂನು ಪ್ರಕಾರ ಕಠಿಣ ಕ್ರಮ ಕೈಗೊಳ್ಳಲಾಗುವುದು," ಎಂದು ಅವರು ಹೇಳಿದ್ದಾರೆ.

ತನಿಖೆಯನ್ನು ಸಿಐಡಿ (CID) ಗೆ ವಹಿಸಿರುವುದು, ಲಕ್ಷಾಂತರ ಆಕಾಂಕ್ಷಿಗಳು ಹಾಗೂ ಸಾರ್ವಜನಿಕರಲ್ಲಿ ವಿಶ್ವಾಸ ಮೂಡಿಸುವಂತಹ ಸ್ವತಂತ್ರ ಮತ್ತು ಪಾರದರ್ಶಕ ತನಿಖೆಯನ್ನು ಖಚಿತಪಡಿಸಿಕೊಳ್ಳುವ ಸರ್ಕಾರದ ದೃಢ ನಿರ್ಧಾರವನ್ನು ಪ್ರತಿಬಿಂಬಿಸುತ್ತದೆ. ಸ್ಪರ್ಧಾತ್ಮಕ ಪರೀಕ್ಷೆಗಳ ಪಾವಿತ್ರ್ಯತೆಯನ್ನು ಕಾಪಾಡುವುದು ಮತ್ತು ಅರ್ಹತೆಗೆ ರಕ್ಷಣೆ ನೀಡುವುದು ನಮ್ಮ ಆದ್ಯತೆಗಳಾಗಿವೆ" ಎಂದು ಸಚಿವರು ತಿಳಿಸಿದ್ದಾರೆ.

ಸಿಬಿಐ (CBI) ಅಥವಾ ಕರ್ನಾಟಕ ಹೈಕೋರ್ಟ್‌ನ ಹಾಲಿ ನ್ಯಾಯಾಧೀಶ–ರಿಂದ ತನಿಖೆ ನಡೆಸಬೇಕೆಂದು ವಿರೋಧ ಪಕ್ಷವಾದ ಬಿಜೆಪಿ ಆಗ್ರಹಿಸುತ್ತಿರುವಾಗಲೇ ಈ ಘೋಷಣೆ ಹೊರಬಿದ್ದಿದೆ.

## ಸ್ವಾತಂತ್ರ್ಯ ದಿನಾಚರಣೆ ಅರ್ಥಪೂರ್ಣವಾಗಿಸಲು ಅಗತ್ಯ ಸಿದ್ಧತೆ ಕೈಗೊಳ್ಳಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜಿಲ್ಲಾಡಳಿತದ ವತಿಯಿಂದ ಆಗಸ್ಟ್ 15ರಂದು ಆ ೦ ು ೀ ಜಿ ಸ ಿ ಲಾ ಗ ು ವ ಸ್ವಾತಂತ್ರ್ಯದಿನಾಚರಣೆಯನ್ನು ಅತ್ಯಂತ ಅಚ್ಚುಕಟ್ಟಾಗಿ, ಶಿಸ್ತುಬದ್ಧವಾಗಿ ಹಾಗೂ ಅರ್ಥಪೂರ್ಣವಾಗಿ ನೆರವೇರಿಸಲು ಎಲ್ಲ ಅಗತ್ಯ ಪೂರ್ವಸಿದ್ಧತೆಗಳನ್ನು ಕೈಗೊಳ್ಳಬೇಕು ಮತ್ತು ಸಂಬಂಧಿತ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ನಡೆದ ಸ್ವಾತಂತ್ರ್ಯದಿನಾಚರಣೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಆಗಸ್ಟ್ 15ರಂದು ನಗರದ ಡಾ. ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಜಿಲ್ಲಾ ಮಟ್ಟದ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮ ನೆರವೇರಲಿದೆ ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ, ಪ್ರೊಬೇಷನರಿ ಐಪಿಎಸ್ ಅಧಿಕಾರಿ ಅಭಿಷೇಕ ಸೆಹರಾ, ಅಪರ ಜಿಲ್ಲಾಧಿಕಾರಿ ಡಾ. ಓದ್ರಾಮ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ವಿವಿಧ ಸಂಘ–ಸಂಸ್ಥೆಗಳ ಮುಖಂಡರು ಉಪಸ್ಥಿತರಿದ್ದರು.

## ಸಿ.ಟಿ.ರವಿ ಹೇಳಿಕೆ ಖಂಡಿಸಿ ಮುಲ್ಲಾ ಸಮುದಾಯದಿಂದ ಮನವಿ

■ ಉದಯರಶ್ಮಿ ದಿನಪತ್ರಿಕೆ



ದೇವರಹಿಪ್ಪರಗಿ: ಮುಲ್ಲಾ ಸಮುದಾಯದ ಕುರಿತು ರಾಜ್ಯ ಬಿಜೆಪಿ ಧುರೀಣ ಸಿ.ಟಿ. ರವಿ ಅವಹೇಳನಕಾರಿ ಹಾಗೂ ಅಗೌರವದ ಪದಗಳನ್ನು ಬಳಸಿ ಮಾತನಾಡಿರುವುದನ್ನು ಖಂಡಿಸಿ, ಅವರ ವಿರುದ್ಧ ಪ್ರತಿಭಟನೆ ಕೈಗೊಂಡು ತಹಶೀಲ್ದಾರ ನಿಂಗಣ್ಣ ಬಿರಾದಾರ ಅವರಿಗೆ ಮನವಿ ಸಲ್ಲಿಸಿದರು.

ಪಟ್ಟಣದ ತಹಶೀಲ್ದಾರ ಕಾರ್ಯಾಲಯದ ಮುಂದೆ ಮಂಗಳವಾರ ಸಭೆ ಸೇರಿ ಪ್ರತಿಭಟನೆ ಕೈಗೊಂಡರು. ಈ ಸಂದರ್ಭದಲ್ಲಿ ಜೆಡಿಎಸ್ ಧು–ರೀಣ ಮುನೀರ್ ಅಹ್ಮದ್ ಮಳಖೇಡ ಮಾತನಾಡಿ, ಯಾವುದೇ ಸಮುದಾಯದ ಭಾವನೆಗಳಿಗೆ ಧಕ್ಕೆ ಉಂಟು ಮಾಡುವಂತಹ ಹೇಳಿಕೆಗಳು ಸಮಾಜದಲ್ಲಿ ಸೌಹಾರ್ದತೆಯನ್ನು ಹಾಳುಮಾಡುತ್ತವೆ. ಸಾರ್ವಜನಿಕ ಜೀವನದಲ್ಲಿರುವವರು ಜವಾಬ್ದಾರಿಯುತವಾಗಿ ಮಾತನಾಡಬೇಕು ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಮುಖಂಡರಾದ ಎ.ಡಿ.ಮುಲ್ಲಾ, ಇಮ್ತಿಯಾಜ್ ಮುಲ್ಲಾ ಮಾತನಾಡಿ, ಮುಸ್ಲಿಮ್ ಸಮುದಾಯ ವೈವಿಧ್ಯಮಯವಾಗಿದ್ದು ಇದರಲ್ಲಿ ಮುಲ್ಲಾ, ಸೈಯದ್,ಶೇಖ್, ಪಠಾಣ, ಪಿಂಜಾರ, ಬೇರಿ ಸಹಿತ ಹಲವು ಪಂಗಡಗಳಿವೆ. ಇವುಗಳನ್ನು ತಿಳಿಯದೇ ಕೇವಲ ಇಡೀ ಸಮುದಾಯದ ಕುರಿತು ಹೇಳಿಕೆ ನೀಡುವುದು ಸಮಂಜಸವಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು. ನಂತರ ತಹಶೀಲ್ದಾರರಿಗೆ ಮನವಿ ಸಲ್ಲಿಸಿ, ಘಟನೆಗೆ ಸಂಬಂಧಿಸಿದಂತೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸರ್ಕಾರವನ್ನು ಒತ್ತಾಯಿಸಿದರು.

ಪಟ್ಟಣ ಪಂಚಾಯತಿ ಮಾಜಿಅಧ್ಯಕ್ಷ ಭಾಸ್ಕರ್ ಗುಡಿಮನಿ, ಹೈದರಸಾಬ್ ಮುಲ್ಲಾ, ಇಕ್ಬಾಲ್ ಬಿಜಾಪುರ, ಶಬ್ಬೀರ್ ಮುಲ್ಲಾ, ಜಬ್ಬಾರ್ ಚೌದ್ರಿ, ಸಮೀರ್ ಮಕಾಂದಾರ್, ಸೈಫನ್ ಮುಲ್ಲಾ, ಬುಡ್ಡೆಸಾಬ್ ಮುಲ್ಲಾ, ದಾವಲ್‌ಸಾಬ್ ಗಂಗೂರ್, ಇಸ್ಮಾಯಿಲ್ ಮುಲ್ಲಾ(ಮೆಸ್ತ್ರಿ), ಮಿಯಾಜ್ ಯಲಗಾರ ಸಹಿತ ಇತರರು ಇದ್ದರು

## ಯುವ ಪ್ರತಿಭೆಗಳ ಕನಸಿಗೆ ರೆಕ್ಕೆ ನೀಡುವ ಕೃತಕ ಬುದ್ಧಿಮತ್ತೆ ವೇದಿಕೆಗಳು

### ಪ್ರವಾಹ ಲ್ಯಾಬ್ ಪ್ರೈವೇಟ್ ಲಿಮಿಟೆಡ್ ಕಂಪನಿಯ www.merakify.ai ಎಂಬ ಆನ್‌ಲೈನ್ ಬುದ್ಧಿಮತ್ತೆ(AI) ವೇದಿಕೆಯನ್ನು ಉದ್ಘಾಟಿಸಿದ ಸಚಿವ ಎಂ. ಬಿ. ಪಾಟೀಲ ಅಭಿಮತ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಯುವ ಪ್ರತಿಭೆಗಳು ನವೋದ್ಯಮಗಳ ಮೂಲಕ ತಂತ್ರಜ್ಞಾನ ಕ್ಷೇತ್ರದಲ್ಲಿ ಹೊಸ ಅಧ್ಯಾಯ ಬರೆಯುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಹೇಳಿದ್ದಾರೆ.

ಸೋಮವಾರ ನಗರದಲ್ಲಿ ವಿಧಾನ ಪರಿಷತ ಶಾಸಕ ಸುನೀಲಗೌಡ ಪಾಟೀಲ ಅವರ ಪುತ್ರಿ ಸಾನ್ವಿ ಪಾಟೀಲ ತಮ್ಮ ಯುವ ಸ್ನೇಹಿತರೊಂದಿಗೆ ಸೇರಿ ಪ್ರಾರಂಭಿಸಿರುವ ಪ್ರವಾಹ ಲ್ಯಾಬ್ ಪ್ರೈವೇಟ್ ಲಿಮಿಟೆಡ್ ಕಂಪನಿಯ www.merakify.ai ಎಂಬ ಆನ್‌ಲೈನ್ ಬುದ್ಧಿಮತ್ತೆ(AI) ವೇದಿಕೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಂಥ ಕೃತಕ ಬುದ್ಧಿಮತ್ತೆ ವೇದಿಕೆಗಳು ಯುವ ಪ್ರತಿಭೆಗಳ ಕನಸಿಗೆ ರೆಕ್ಕೆ ನೀಡುತ್ತವೆ. ಈ ನವೋದ್ಯಮ ತಂತ್ರಜ್ಞಾನ ಆಧಾರಿತವಾಗಿದ್ದು, ಕಥೆಗಾರರು, ಸಿನಿಮಾ ನಿರ್ಮಾಪಕರು, ಲೇಖಕರು, ಸೃಜನಶೀಲರು ಹಾಗೂ ಉದ್ಯಮಿಗಳಿಗೆ ಅತ್ಯಂತ ಉಪಯುಕ್ತ ವೇದಿಕೆಯಾಗಿದೆ. ನಮ್ಮ ಮನದಲ್ಲಿರುವ ಹೊಸ ಆಲೋಚನೆಗಳನ್ನು ಕೃತಕ ಬುದ್ಧಿಮತ್ತೆಯ ನೆರವಿನಿಂದ ಗುಣಮಟ್ಟದ ವಿಡಿಯೋಗಳಾಗಿ ಪರಿವರ್ತಿಸುವ ಸಾಮರ್ಥ್ಯವನ್ನು ಈ ವೇದಿಕೆ ಹೊಂದಿದೆ. ಶಿಕ್ಷಣ, ಜಾಹೀರಾತು, ಉದ್ಯಮ ಹಾಗೂ ಸಾಮಾಜಿಕ ಜಾಲತಾಣಗಳ ಬಳಕೆದಾರ–ರಿಗೆ ಅಗತ್ಯವಾದ ವಿವಿಧ ರೀತಿಯ ವಿಡಿಯೋ ಕಂಟೆಂಟ್‌ಗಳನ್ನು ಸುಲಭವಾಗಿ ಸೃಷ್ಟಿಸಲು ಇದು ನೆರವಾಗಲಿದೆ ಎಂದು ಅವರು ಹೇಳಿದರು.

ವಿಧಾನ ಪರಿಷತ ಶಾಸಕ ಸುನೀಲಗೌಡ ಪಾಟೀಲ ಮಾತನಾಡಿ, ಯುವಕರ ಈ ಹೊಸ ಪ್ರಯತ್ನ ವಿನೂತನವಾಗಿದ್ದು, ಅವರು ತಮ್ಮ ಕಾರ್ಯದಲ್ಲಿ ಯಶಸ್ವಿಯಾಗಲಿ ಎಂದು ಶುಭ ಹಾರೈಸಿದರು.

ಇದೆ ವೇಳೆ www.merakify.ai ರೂಪಿಸಿರುವ ಬಂಥನಾಳ ಸಂಗನಬಸವ ಶಿವಯೋಗಿಗಳು, ಶಿಕ್ಷಣ ಪ್ರೇಮಿ ದಿ. ಬಿ. ಎಂ. ಪಾಟೀಲರ ಹಾಗೂ ಬಿ.ಎಲ್.ಡಿ.ಇ ಅಧ್ಯಕ್ಷ ಎಂ. ಬಿ. ಪಾಟೀಲ ಅವರ ಜೀವನ ಕುರಿತು ಎಐ ನಲ್ಲಿ ರಚಿಸಿದ ಕಿರುಚಿತ್ರ ಪ್ರದರ್ಶನಕ್ಕೆ ಸಚಿವರು ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಬೆಕ್ಕಿನ ಕಲ್ಮಠ–ಶಿವಮೊಗ್ಗ ಜಗದ್ಗುರು ಡಾ. ಮಲ್ಲಿಕಾರ್ಜುನ ಮುರುಘರಾಜೇಂದ್ರ ಮಹಾಸ್ವಾಮಿಗಳು, ಸಾಗರದ ಸಂಸ್ಥಾನ ಮಠ, ಜಡೆ ಡಾ. ಮಹಾಂತ ಸ್ವಾಮಿಗಳು, ವಿಜಯಪುರ ಶಾಂತಾಶ್ರಮ, ಹುಬ್ಬಳ್ಳಿಯ ಶ್ರೀ ಅಭಿನವ ಸಿದ್ಧಾರೂಢ ಸ್ವಾಮಿಗಳು, ಹುಬ್ಬಳ್ಳಿ– ನಿಡೋಣಿ ಎರಡೆತ್ತಿನಮಠದ ಶ್ರೀ ಸಿದ್ದಲಿಂಗ ಮಹಾಸ್ವಾಮಿಗಳು, ಮಣಕವಾಡ ದೇವ ಮಂದಿರ ಮಠದ ಶ್ರೀ ಅಭಿನವ ಮೃತ್ಯುಂಜಯ ಸ್ವಾಮಿಗಳು, ಮಾಜಿ ಶಾಸಕ ಪ್ರೊ. ರಾಜು ಆಲಗೂರ, ವಿಡಿಎ ಅಧ್ಯಕ್ಷ ಡಾ. ಗಂಗಾಧರ ಸಂಬಣ್ಣಿ, ಮುಖಂಡರಾದ ಹಮೀದ್ ಮುಶ್ರಿಫ್, ಪ್ರವಾಹ ಲ್ಯಾಬ್ಸ್ ಪ್ರೈವೇಟ್ ಲಿಮಿಟೆಡ್ ಸಂಸ್ಥೆಯ ಸಂಸ್ಥಾಪಕಿ ಸಾನ್ವಿ ಪಾಟೀಲ, ಪ್ರದೀಪ ಮಳಜಿ, ವಿಜಯ ಜತ್ತಿ, ಸಮರ್ಥ ದತ್ತರಗಾವಿ, ದತ್ತಾ ಕಂಬಾಗಿ, ಹರೀಶ ಅವರನ್ನೊಳಗೊಂಡ ಮುಂತಾದವರು ಉಪಸ್ಥಿತರಿದ್ದರು.

## ಜಿ.ಪಂ. ಉಪಕಾರ್ಯದರ್ಶಿ ಪ್ರಕಾಶ ವಡ್ಡರ ಸೂಚನೆ

# ವಿಬಿ-ಜಿ ರಾಮ್ ಜಿ: ಕೂಲಿಕಾರರಿಗೆ ಉದ್ಯೋಗ ಕಲ್ಪಿಸಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಗ್ರಾಮೀಣ ಪ್ರದೇಶದ ಪ್ರತಿಯೊಬ್ಬ ಅರ್ಹ ಕುಟುಂಬಕ್ಕೂ ಉದ್ಯೋಗಾವಕಾಶ ಕಲ್ಪಿಸುವುದು ಹಾಗೂ ಗ್ರಾಮಾಭಿವೃದ್ಧಿ ಕಾಮಗಾರಿಗಳನ್ನು ಗುಣಮಟ್ಟದೊಂದಿಗೆ ಅನುಷ್ಠಾನಗೊಳಿಸುವುದು ವಿಬಿ-ಜಿ ರಾಮ್ ಜಿ ಯೋಜನೆಯ ಪ್ರಮುಖ ಉದ್ದೇಶವಾಗಿದ್ದು, ಗ್ರಾಮ ಪಂಚಾಯಿತಿಗಳು ಹೆಚ್ಚಿನ ಕಾಮಗಾರಿಗಳನ್ನು ಗುರುತಿಸಿ ಕೂಲಿಕಾರರಿಗೆ ನಿರಂತರ ಉದ್ಯೋಗ ಒದಗಿಸಬೇಕು ಎಂದು ಜಿಲ್ಲಾ ಪಂಚಾಯತಿಯ ಉಪಕಾರ್ಯದರ್ಶಿಗಳಾದ ಪ್ರಕಾಶ ವಡ್ಡರ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಬಸವನಬಾಗೇವಾಡಿ ತಾಲೂಕಿನ ಮುತ್ತಗಿ ಗ್ರಾಮ ಪಂಚಾಯಿತಿಗೆ ಸೋಮವಾರ ಭೇಟಿ ನೀಡಿದ ಅವರು, ವಿಬಿ-ಜಿ ರಾಮ್ ಜಿ ಯೋಜನೆಯಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನಿರ್ಮಾಣವಾಗುತ್ತಿರುವ ಅಮೃತ ಸರೋವರ ಕಾಮಗಾರಿಯನ್ನು ಪರಿಶೀಲಿಸಿ, ಕಾಮಗಾರಿ ಸ್ಥಳದಲ್ಲಿ ಕೆಲಸ ನಿರ್ವಹಿಸುತ್ತಿದ್ದ ಕೂಲಿಕಾರರೊಂದಿಗೆ ನೇರವಾಗಿ ಸಂವಾದ ನಡೆಸಿದ ಬಳಿಕ ಅವರು ಮಾತನಾಡಿದರು. ಕಾಮಗಾರಿ ಸ್ಥಳದಲ್ಲಿ ಶುದ್ಧ ಕುಡಿಯುವ ನೀರು ಹಾಗೂ ನೆರಳಿನ ವ್ಯವಸ್ಥೆ ಸಮರ್ಪಕವಾಗಿರುವಂತೆ ನೋಡಿಕೊಳ್ಳಬೇಕು ಎಂದು ಸೂಚಿಸಿದ ಅವರು, ಪ್ರತಿದಿನ 500ಕ್ಕೂ ಹೆಚ್ಚು ಕೂಲಿಕಾರರಿಗೆ ಉದ್ಯೋಗಾವಕಾಶ ಕಲ್ಪಿಸುವ ಗುರಿಯೊಂದಿಗೆ ಕಾಮಗಾರಿಗಳನ್ನು ಯೋಜಿತವಾಗಿ ಅನುಷ್ಠಾನಗೊಳಿಸುವಂತೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಕೆರೆಗಳು, ಕಾಲುವೆಗಳು ಸೇರಿದಂತೆ ಕೈಗೊಳ್ಳಬಹುದಾದ ಎಲ್ಲ ಕಾಮಗಾರಿಗಳನ್ನು ಗುರುತಿಸಿ ಯುಕ್ತಧಾರ ತಂತ್ರಾಂಶದಲ್ಲಿ ತ್ವರಿತವಾಗಿ ಅಳವಡಿಸಿ, ಕೂಲಿಕಾರರಿಗೆ ನಿರಂತರವಾಗಿ ಕೆಲಸ ಒದಗಿಸುವಂತೆ ತಾಂತ್ರಿಕ ಸಹಾಯಕರಿಗೆ ಸೂಚಿಸಿದರು. ತ್ವರಿತವಾಗಿ ಕೂಲಿ ಪಾವತಿ: ವಿಬಿ-ಜಿ ರಾಮ್ ಜಿ ಯೋಜನೆಯಡಿ ಮುಂದಿನ ದಿನಗಳಲ್ಲಿ ಕೂಲಿ ಪಾವತಿಯಲ್ಲಿ ಯಾವುದೇ ವಿಳಂಬವಾಗದಂತೆ ಕ್ರಮ ಕೈಗೊಳ್ಳಲಾಗುತ್ತಿದ್ದು,



ನಿಗದಿತ ಅವಧಿಯಲ್ಲೇ ಕೂಲಿ ಮೊತ್ತವನ್ನು ಪಾವತಿಸಲಾಗುವುದು ಎಂದು ಕೂಲಿಕಾರರಿಗೆ ಭರವಸೆ ನೀಡಿದರು. ಪ್ರತಿಯೊಬ್ಬ ಕೂಲಿಕಾರರು ಪ್ರತಿದಿನ ಎರಡು ಬಾರಿ ಎನ್ ಎಂಎಂಎಸ್ ಆಪ್ ಮೂಲಕ ನೈಜ ಹಾಜರಾತಿ ದಾಖಲಿಸುವುದು ಕಡ್ಡಾಯವಾಗಿದ್ದು, ಈ ನಿಯಮವನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ತಿಳಿಸಿದರು.

ಈ ಸಂದರ್ಭದಲ್ಲಿ ಸಹಾಯಕ ನಿರ್ದೇಶಕರು (ಗ್ರಾ.ಉ) ಪ್ರಕಾಶ ದೇಸಾಯಿ, ಎನ್.ಪಿ.ಎಸ್. ಶಾಲೆಯ ಮುಖ್ಯ ಶಿಕ್ಷಕ ಅಶೋಕ ಟಕ್ಕಳಕಿ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವಿಜಯಕುಮಾರ ಅಸ್ಕಿ, ಗ್ರಾಮ ಪಂಚಾಯಿತಿ ಸಿಬ್ಬಂದಿ, ಸ್ವ-ಸಹಾಯ ಸಂಘದ ಸಿಬ್ಬಂದಿ, ಕಾಯಕ ಬಂಧುಗಳು, ವಿಬಿ-ಜಿ ರಾಮ್ ಜಿ ಯೋಜನೆಯ ಕೂಲಿಕಾರರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು

### ಕರ ವಸೂಲಾತಿ ಹೆಚ್ಚಿಸಲು ಸೂಚನೆ

ನಂತರ ಗ್ರಾಮ ಪಂಚಾಯಿತಿ ಕಚೇರಿಗೆ ಭೇಟಿ ನೀಡಿ ಕರ ವಸೂಲಾತಿ ಪ್ರಗತಿಯನ್ನು ಪರಿಶೀಲಿಸಿದ ಅವರು, ವಸೂಲಾತಿ ಅತೀ ಕಡಿಮೆ ಇರುವ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು. ಈ ತಿಂಗಳ ಅಂತ್ಯದೊಳಗೆ 10 ಲಕ್ಷ ರೂ. ಕರ ವಸೂಲಾತಿ ಮಾಡುವಂತೆ ಬಿಲ್ ಕಲೆಕ್ಟರ್

### ಶಾಲೆಯ ಮೂಲಸೌಕರ್ಯ ಪರಿಶೀಲನೆ

ಬಳಿಕ ಮುತ್ತಗಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಭೇಟಿ ನೀಡಿದ ಉಪಕಾರ್ಯದರ್ಶಿಯವರು, ಶಾಲೆಯ ಮೂಲಸೌಕರ್ಯಗಳನ್ನು ಪರಿಶೀಲಿಸಿದರು. ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ನಿರ್ಮಾಣಗೊಂಡ ಬಿಸಿಯೂಟದ ಅಡುಗೆ ಕೋಣೆಯನ್ನು ವೀಕ್ಷಿಸಿ ದಾಸ್ತಾನು ಸಂಗ್ರಹ ವಹಿಯನ್ನು ಪರಿಶೀಲಿಸಿದರು.

### ಸ್ವ-ಸಹಾಯ ಸಂಘಗಳ ಚಟುವಟಿಕೆಗಳ ಪರಿಶೀಲನೆ

ಮಹಿಳಾ ಒಕ್ಕೂಟ ಘಟಕಕ್ಕೆ ಭೇಟಿ ನೀಡಿ ಕಟ್ಟಡದ ವಾಸ್ತವ ಸ್ಥಿತಿಯನ್ನು ಪರಿಶೀಲಿಸಿ, ಸ್ವ-ಸಹಾಯ ಸಂಘದ ಸಿಬ್ಬಂದಿಗಳೊಂದಿಗೆ ಸಂವಾದ ನಡೆಸಿದರು. ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಸ್ವ-ಸಹಾಯ ಸಂಘಗಳ ಮಾಹಿತಿ ಪಡೆದು ಸಿಐಎಫ್ ಸಾಲ ವಿತರಣೆ ಹಾಗೂ ಸಂಘಗಳ ಆರ್ಥಿಕ ಚಟುವಟಿಕೆಗಳ ಕುರಿತು ಚರ್ಚಿಸಿದರು.

ಒಕ್ಕೂಟದ ಬ್ಯಾಂಕ್ ಖಾತೆಯ ನಿರ್ವಹಣೆಯನ್ನು ಪರಿಶೀಲಿಸಿದ ಅವರು, ಐಎಫ್ ಸಿ ಆಡಳಿತಾತ್ಮಕ ವೆಚ್ಚದಡಿ ಕಟ್ಟಡ ದುರಸ್ತಿ ಕಾಮಗಾರಿ ಕೈಗೊಳ್ಳುವಂತೆ ಸಿಬ್ಬಂದಿಗೆ ಸೂಚಿಸಿದರು.

# ಆತ್ಮ ರಕ್ಷಣೆಗೆ ಕರಾಟೆ ತರಬೇತಿ ಅಗತ್ಯ :ಪ್ರೊ.ಖೊದ್ನಾಪೂರ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ:ಪ್ರಸ್ತುತಇಂದಿನದಿನಗಳಲ್ಲಿ ಮಕ್ಕಳಿಗೆ ಆತ್ಮರಕ್ಷಣೆಯ ಅವಶ್ಯಕತೆಯಿದೆ. ಜೀವನ ಸಂಕೀರ್ಣಮಯವಾಗುತ್ತಿದ್ದು, ಅನೇಕ ಸಂದರ್ಭಗಳಲ್ಲಿ ಮಕ್ಕಳ ಮೇಲೆ ಹಲ್ಲೆ, ದೌರ್ಜನ್ಯ ಮತ್ತು ಮಾನಸಿಕ ಮತ್ತು ದೈಹಿಕ ಹಿಂಸೆಯಂತಹ ದುಷ್ಕೃತ್ಯಗಳು ನಡೆಯುತ್ತಿವೆ. ಆದ್ದರಿಂದ ಮಕ್ಕಳಲ್ಲಿ ಆತ್ಮಸ್ಥೈರ್ಯ, ಆತ್ಮರಕ್ಷಣೆ ಮತ್ತು ಮಾನಸಿಕ ಆತ್ಮಬಲವನ್ನು ಹೆಚ್ಚಿಸುವದರೊಂದಿಗೆ ಸಾಮಾಜಿಕವಾಗಿ ಜಾಗರೂಕರನ್ನಾಗಿ ಮಾಡಲು ಕರಾಟೆ ತರಬೇತಿ ಅತಿ ಅವಶ್ಯಕವಾಗಿದೆ ಎಂದು ಪ್ರೊ. ಎಂ.ಎಸ್. ಖೊದ್ನಾಪೂರ ಅವರು ಅಭಿಪ್ರಾಯಪಟ್ಟರು.

ಅವರು ನಗರದ ಅಥಣಿ ರಸ್ತೆಯ ಅಲ್-ಅಮೀನ ಆಸ್ಪತ್ರೆಯ ಎದುರಿಗೆ ಎನ್.ಜಿ.ಓ ಕಾಲನಿಯ ಜೈ ಶ್ರೀ ಆಂಜನೇಯ ದೇವಸ್ಥಾನದಲ್ಲಿ ಜು.25 ರಂದು ವಾರಿಯರ್ಸ ವೇ ಮಾರ್ಷಲ್ ಆರ್ಟ್ಸ ಇವರು ಆಯೋಜಿಸಿದ 3 ನೇಯ ಓಪನ್ ನ್ಯಾಶನಲ್ ಲೆವೆಲ್ ಕರಾಟೆ ಚಾಂಪಿಯನ್‌ಶಿಪ್‌ನಲ್ಲಿ ಅಮೋಘ ಸಾಧನೆಗೈದ ಮಕ್ಕಳಿಗೆ ಪ್ರಶಸ್ತಿ ಮತ್ತು ಪಾರಿತೋಷಕ ವಿತರಣಾ ಸಮಾರಂಭದಲ್ಲಿ ಅವರು ಮಾತನಾಡುತ್ತಿದ್ದರು.

ಅವರು ಮಾತನಾಡುತ್ತಾ, ಇಂದಿನ ಶಿಕ್ಷಣ ವ್ಯವಸ್ಥೆಯಲ್ಲಿ ಮಕ್ಕಳು ಶಾಲೆ, ಪಾಠ-ಪ್ರವಚನ, ಹೋಮ್ ವರ್ಕ, ಟ್ಯೂಷನ್ ಹೀಗೆ ಶಿಕ್ಷಣ ಕೇವಲ ಜ್ಞಾನಾರ್ಜನೆಗಾಗಿ ಎನ್ನುವಂತಾಗಿದೆ. ಮಕ್ಕಳು ಬೌದ್ಧಿಕ, ಮಾನಸಿಕ ಮತ್ತು ದೈಹಿಕ ಚಟುವಟಿಕೆಗಳಲ್ಲಿ ಸಕ್ರೀಯವಾಗಿ ಪಾಲ್ಗೊಂಡಾಗ ಮಾತ್ರ ಸರ್ವಾಂಗೀಣ ಪ್ರಗತಿ ಹೊಂದುವರು. ಆದ್ದರಿಂದ ತರಬೇತಿ ಮಕ್ಕಳ ದೈಹಿಕ ಮತ್ತು ಮಾನಸಿಕ ಆರೋಗ್ಯಕ್ಕೆ ಅತ್ಯಗತ್ಯವಾಗಿದೆ. ಇದು ಕೇವಲ ಹೋರಾಟದ ಕಲೆ ಅಲ್ಲ. ಬದಲಾಗಿ ಜೀವನದಲ್ಲಿ ಶಿಸ್ತು ಮತ್ತು ನಮ್ರತೆಯನ್ನು ಕಲಿಸುತ್ತದೆ. ಸಂಭಾವ್ಯ ಅಪಾಯಗಳನ್ನು ಗುರುತಿಸಲು ಮತ್ತು ಪರಿಣಾಮಕಾರಿಯಾಗಿ ಪ್ರತಿಕ್ರಿಯಿಸಲು ಕಲಿಸುತ್ತದೆ ಎಂದರು. ಕಾರ್ಯಕ್ರಮದಲ್ಲಿ ದೇವಸ್ಥಾನದ ಸಮೀತಿ ಅಧ್ಯಕ್ಷ ಸಂತೋಷ ಪಾಟೀಲ ಮಾತನಾಡಿ, ಮಕ್ಕಳ ಸರ್ವಾಂಗೀಣ ಬೆಳವಣಿಗೆಯು ಜ್ಞಾನದ ಜತೆಗೆ ಕ್ರೀಡೆ ಮತ್ತು ಇನ್ನಿತರ ದೈಹಿಕ ಕಸರತ್ತು ನೀಡುವ ಚಟುವಟಿಕೆಗಳು ಅವಶ್ಯಕವಾಗಿದೆ. ಅದಕ್ಕಾಗಿ ಪಾಲಕರು ತಮ್ಮ ಮಕ್ಕಳಿಗೆ ಕರಾಟೆ ತರಬೇತಿ ನೀಡಿ, ಆತ್ಮರಕ್ಷಣೆಗಾಗಿ ಸದೃಢರನ್ನಾಗಿಸಬೇಕು ಎಂದು ಹೇಳಿದರು.

ಕರಾಟೆ ಪಟುಗಳ ವಿಶೇಷ ಸಾಧನೆ: ಇದೇ ಸಂದರ್ಭದಲ್ಲಿ ಜು.19 ರಂದು ಗದಗದಲ್ಲಿ ಜರುಗಿದ 3ನೇಯ ಓಪನ್ ನ್ಯಾಶನಲ್ ಲೆವೆಲ್ ಕರಾಟೆ ಚಾಂಪಿಯನ್‌ಶಿಪ್‌ನಲ್ಲಿ ಅಮೋಘ ಸಾಧನೆಗೈದ ಪ್ರಥಮ ಮೇಲಿನಮನಿ ಮತ್ತು ಧನ್ಯಾ ಕೊಣ್ಣೂರ ಕುಮಿಟೆ ಮತ್ತು ಕಟಾದಲ್ಲಿ ಪ್ರಥಮ ಸ್ಥಾನ, ಗಗನ ಬಜಂತ್ರಿ, ಸ್ವರೂಪ ಬೆನಕನಹಳ್ಳಿ, ಆಕಾಶ ಬಿರಾದಾರ ಇವರು ಕುಮಿಟೆಯಲ್ಲಿ ಪ್ರಥಮ ಸ್ಥಾನ, ಗಿರಿವಾನ್ ಅಥರ್ಗಾ ಮತ್ತು ಶ್ರೀಹರಿ ಶಿವಗೊಂಡ ಇವರು ಕುಮಿಟೆಯಲ್ಲಿ ದ್ವಿತೀಯ ಸ್ಥಾನ ಮತ್ತು ರಜತ್ ಹಳ್ಳಿ ಈತನು ಕಟಾದಲ್ಲಿ ತೃತೀಯ ಸ್ಥಾನ ಈ ಎಲ್ಲ ಮಕ್ಕಳು ವಿಜಯಪುರ ಜಿಲ್ಲೆಯ ಕೀರ್ತಿ ಹೆಚ್ಚಿಸಿದ್ದಾರೆ. ಈ ಎಲ್ಲ ಕರಾಟೆ ಪಟುಗಳ ಸಾಧನೆಗೆ ಕರಾಟೆ ತರಬೇತುದಾರ ಶ್ರೀ ಪ್ರವೀಣ ವಠಾರ, ಶಿವಶರಣ ಹಾಗೂ ನವೀನ ಇವರು ವಿದ್ಯಾರ್ಥಿಗಳನ್ನು ಅಭಿನಂದಿಸಿದ್ದಾರೆ.

ಈ ಕಾರ್ಯಕ್ರಮದಲ್ಲಿ ನಿರ್ದೇಶಕರಾದ ಬಿ.ಆರ್.ಬಿರಾದಾರ, ಎಸ್.ಜಿ.ನಿಂಗನಗೌಡ್ರ, ಬಾಬು ಕೋಲಕಾರ, ಶ್ರೀರಾಮ ದೇಶಪಾಂಡೆ ಸಹ ಉಪಸ್ಥಿತರಿದ್ದರು.

# ಕನ್ನೊಳ್ಳಿ-ಕೊಕಟನೂರದಲ್ಲಿ ಡಿಜಿಟೈಸೇಶನ್ ಕಾರ್ಯ ಶೇ.100 ಪೂರ್ಣ

## ಮೇಲ್ವಿಚಾರಕರಿಗೆ ಜಿಲ್ಲಾಧಿಕಾರಿಗಳಿಂದ ಸನ್ಮಾನ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: 33-ಸಿಂದಗಿ ವಿಧಾನಸಭಾ ಮತಕ್ಷೇತ್ರದ ಸಿಂದಗಿ ತಾಲೂಕಿನ ಕನ್ನೊಳಿ ಮತ್ತು ಕೊಕಟನೂರ ಗ್ರಾಮಗಳ ಭಾಗ ಸಂಖ್ಯೆ 213 ರಿಂದ 222ರವರೆಗೆ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ-2026ರ ಗಣತಿ ನಮೂನೆಗಳ ವಿತರಣೆ ಹಾಗೂ ಡಿಜಿಟೈಸೇಶನ್ ಕಾರ್ಯವನ್ನು ನಿಗದಿತ ಅವಧಿಗೂ ಮುನ್ನವೇ ಶೇ.100ರಷ್ಟು ಯಶಸ್ವಿಯಾಗಿ ಪೂರ್ಣಗೊಳಿಸಿದ ಮೇಲ್ವಿಚಾರಕರನ್ನು ಜಿಲ್ಲಾಧಿಕಾರಿಗಳಾದ ಡಾ. ಆನಂದ್ ಕೆ. ಅವರು ಸನ್ಮಾನಿಸಿ ಅಭಿನಂದಿಸಿದರು. ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮೇಲ್ವಿಚಾರಕರಾದ ಎ.ಕೆ. ಬಿರಾದಾರ ಅವರನ್ನು ಸನ್ಮಾನಿಸಿ, ಚುನಾವಣಾ ಆಯೋಗದ ನಿರ್ದೇಶನದಂತೆ ನಡೆಯುತ್ತಿರುವ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯದಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿ ಅತ್ಯಂತ ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಿರುವುದು ಶ್ಲಾಘನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕನ್ನೊಳಿ ಮತ್ತು ಕೊಕಟನೂರ ಗ್ರಾಮಗಳ ಭಾಗ ಸಂಖ್ಯೆ 213 ರಿಂದ 222ರವರೆಗೆ ಗಣತಿ ನಮೂನೆಗಳ ವಿತರಣೆ, ಮನೆ-ಮನೆಗೆ ಭೇಟಿ, ಮಾಹಿತಿಯ ಸಂಗ್ರಹಣೆ ಹಾಗೂ ಡಿಜಿಟೈಸೇಶನ್ ಪ್ರಕ್ರಿಯೆಯನ್ನು ನಿಗದಿತ ಸಮಯಕ್ಕಿಂತ ಮುಂಚಿತವಾಗಿ ಶೇ.100ರಷ್ಟು ಪೂರ್ಣಗೊಳಿಸಿರುವುದು ಜಿಲ್ಲೆಯ ಇತರೆ ಭಾಗಗಳಿಗೆ ಮಾದರಿಯಾಗಬೇಕು ಎಂದು ಅವರು ಹೇಳಿದರು. ಈ ಸಂದರ್ಭದಲ್ಲಿ 33-ಸಿಂದಗಿ ವಿಧಾನಸಭಾ ಮತಕ್ಷೇತ್ರದ ಮತದಾರರ ನೋಂದಣಾಧಿಕಾರಿ ಹಾಗೂ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರಾದ ವಿನಯಕುಮಾರ ಪಾಟೀಲ, ಕನ್ನೊಳ್ಳಿ ಆಡಳಿತಾಧಿಕಾರಿಯಾದ ಎಂ.ಎಸ್. ಸಾಳುಂಕೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಜ್ಞಾನದ ಕರ್ತೃ ಗುರು

## ಇಂದು (ಜುಲೈ 29 ಬುಧವಾರ) "ಗುರು ಪೂರ್ಣಿಮೆ" ಪ್ರಯುಕ್ತ ಈ ವಿಶೇಷ ಲೇಖನ

■ ಉದಯರಶ್ಮಿ ದಿನಪತ್ರಿಕೆ








ಅಕ್ಷರಗಳ ಮೂಲಕ ವಿದ್ಯೆಯನು ಪರಿಚಯಿಸುತ ಅಜ್ಞಾನದ ಕತ್ತಲೆ ಅಳಿಸಿ ಜ್ಞಾನವ ಧಾರೆ ಎರೆಯುವ ನಿಸ್ವಾರ್ಥ ಜೀವಿ ಅರಿವಿನ ಬೆಳಕನು ಸದಾ ನಮ್ಮೊಳಗೆ ಬೆಳಗುತ ಸಂತೃಪ್ತ ಬದುಕಿಗೆ ದೇವರ ಪ್ರತಿರೂಪಿಯಾಗಿ ಸದಾ ಮಾರ್ಗದರ್ಶನ ಮಾಡುತ್ತ ತಪ್ಪಿದಾಗ ತಿದ್ದಿ ಬುದ್ದಿಯ ಹೇಳಿ ಮುನ್ನಡೆಸುವ ಮಹಾನ್ ಶಕ್ತಿಯೇ ಗುರು. ತಾಯಿಯು ನಮಗೆ ಜನ್ಮ ನೀಡಿದರೆ ಗುರುವು ಬದುಕಿಗೆ ಜನ್ಮ ನೀಡುತ್ತಾರೆ ಎಂಬುದು ಅಕ್ಷರಶ:ಸತ್ಯ

ಗುರುವಿಲ್ಲದ ಬದುಕು ದಿಕ್ಕಿಲ್ಲದ ದೋಣಿಯಂತೆ ಗುರುವು ಜೊತೆಗಿದ್ದರೆ ದೀಪದ ಬೆಳಕಿನಲಿ ಸಾಗುವ ಪಯಣದಂತೆ ಎಂಬ ಸಾಲುಗಳು ಬದುಕಿನಲ್ಲಿ ಗುರುವಿನ ಮಹತ್ವವನ್ನು ಸಾರಿ ಹೇಳುತ್ತವೆ.

ಶಾಲೆಯ ಮೆಟ್ಟಿಲೆರುವಾಗ ಮನಸು ಖಾಲಿ ಖಾಲಿ. ದಿನಗಳು ಕಳೆದಂತೆ ಪ್ರತಿದಿನ ಒಂದೊಂದೇ ಅಕ್ಷರಗಳನ್ನು ಕಲಿಸುತ ನಮ್ಮೊಳಗೆಜ್ಞಾನದಬೀಜವನ್ನುಬಿತ್ತುತ್ತಾರೆ.ಈ ಅಕ್ಷರಗಳೆ ಕನಸುಗಳಿಗೆ ರೆಕ್ಕೆಗಳಾಗಿ ಸುಂದರ ಬದುಕಿಗೆ ದಾರಿದೀಪವಾ ಗುತ್ತವೆ.ಏನು ಅರಿಯದ ಮನಸೊಳು ತಮ್ಮಯ ಕರ ಸ್ಪರ್ಶದಿಂದ ವಿದ್ಯೆಯನು ಕರುಣಿಸಿ ತಮ್ಮ ಮಕ್ಕಳಿಗಿಂತ ಹೆಚ್ಚು ಕಾಳಜಿ ವಹಿಸಿ ಇಡೀ ಬದುಕನ್ನು ನಮಗಾಗಿ ಮೀಸಲಿಟ್ಟು ಸದಾ ಮಾರ್ಗದರ್ಶನ ಮಾಡುವ ನಿಮ್ಮ ನಿಸ್ವಾರ್ಥ ಸೇವೆ ನಮಗೆಲ್ಲ ದಾರಿದೀಪ. ತಪ್ಪು ಮಾಡಿದಾಗ ಬೆತ್ತದಿಂದ ಹೊಡೆದು ಗೆದ್ದಾಗ ಪ್ರೀತಿಯ ಅಪ್ಪುಗೆಯಿಂದ ಬಿಗಿದಪ್ಪಿ ನಲಿದು ಭಾವಿ ಭವಿಷ್ಯಕ್ಕೆ ಬೆಳಕಾದಿರಿ.

ನಮ್ಮ ಹಳ್ಳಿಯ ಸರ್ಕಾರಿ ಶಾಲೆಯೊಂದರಲ್ಲಿ ನಡೆದ ನೈಜ ಘಟನೆ ಇದಕ್ಕೆ ಉತ್ತಮ ಉದಾಹರಣೆ. ಅತ್ಯಂತ ಬಡ ಕುಟುಂಬದ ವಿದ್ಯಾರ್ಥಿಯೊಬ್ಬನಿಗೆ ಓದಿನ ಮೇಲೆ ಅಪಾರ ಆಸಕ್ತಿ ಇತ್ತು. ಮನೆಯ ಕಡುಬಡತನ ಪರಿಸ್ಥಿತಿಯಿಂದ ಶಾಲೆ ಬಿಡುವ ನಿರ್ಧಾರಕ್ಕೆ ಬಂದಿದ್ದನು. ಇದನ್ನು ಅರಿತ ಗಣಿತ ವಿಷಯದ ಶಿಕ್ಷಕರಾದ ಕೊಪ್ಪದ ಸರ್ ಅವರು ತಮ್ಮ ಸಂಬಳದಿಂದ ಶಾಲೆಯ ವಿದ್ಯಾರ್ಥಿ ಶುಲ್ಕ ತುಂಬಿ ಪುಸ್ತಕಗಳನ್ನು ಕೊಡಿಸಿದರು. ಪ್ರತಿದಿನ ಶಾಲೆಯ ಅವಧಿಯ ನಂತರ ಉಚಿತವಾಗಿ ಪಾಠ ಹೇಳಿಕೊಟ್ಟರು. ಪರೀಕ್ಷೆಯಲ್ಲಿ ಅವನು ಜಿಲ್ಲೆಯಲ್ಲಿ ಮೊದಲ ಸ್ಥಾನ ಪಡೆದನು. ಕೆಲವು ವರ್ಷಗಳ ನಂತರ ಆತ ಭಾರತೀಯ ಆಡಳಿತ ಸೇವೆಗೆ ಆಯ್ಕೆಯಾದಾಗ ತನ್ನ ಮೊದಲ ಸಾರ್ವಜನಿಕ ಭಾಷಣದಲ್ಲಿ ಹೀಗೆ ಹೇಳಿದನು "ನನ್ನ ಜೀವನವನ್ನು ಬದಲಿಸಿದ್ದು ಕೊಪ್ಪದ ಸರ್ ಅವರು ನನ್ನ ಮೇಲೆ ಇಟ್ಟಂತ ನಂಬಿಕೆ ಮತ್ತು ವಿಶ್ವಾಸ. ಹೀಗಾಗಿಯೇ ಇಂದು ಕನಸು ನನಸಾಗಿ ನಿಮ್ಮ ಮುಂದೆ ಒಬ್ಬ ಅಧಿಕಾರಿಯಾಗಿ ನಿಂತಿರುವೆ ಎಂದಾಗ ಎಲ್ಲರೂ ಎದ್ದು ನಿಂತು ಚಪ್ಪಾಳೆ ತಟ್ಟಿ ಹೆಮ್ಮೆಪಟ್ಟರು.ಈ ಒಂದು ಉದಾಹರಣೆ ವಿದ್ಯಾರ್ಥಿಗಳ ಬದುಕನ್ನು ರೂಪಿಸುವಲ್ಲಿ ಗುರುವಿನ ಪಾತ್ರ ಎಷ್ಟು ಮುಖ್ಯ ಎಂಬುದನ್ನು ತಿಳಿಸುತ್ತದೆ.

ಗುರುವಿನ ಮಹತ್ವದ ಕುರಿತು ವಚನಕಾರರು ವಚನಗಳಲ್ಲಿ ಅರ್ಥಪೂರ್ಣವಾಗಿ ಬಣ್ಣಿಸಿದ್ದಾರೆ. ಅದರಲ್ಲಿ ಸರ್ವಜ್ಞನ ವಚನ ತುಂಬಾ ಅರ್ಥವತ್ತಾಗಿದೆ.

"ಗುರುವಿಂದ ಬಂಧುಗಳು ಗುರುವಿಂದ ಪರದೈವ
ಗುರುವಿಂದಲಾದುದು ಪುಣ್ಯ ಲೋಕಕ್ಕೆ
ಗುರುವಿಂದ ಮುಕ್ತಿ ಸರ್ವಜ್ಞ"

ನಮಗೆ ನಿಜವಾದ ಬಂಧು, ದೈವ, ಸರ್ವಸ್ವವೂ ಗುರುವೇ ಆಗಿದ್ದಾನೆ. ಈ ಲೋಕದಲ್ಲಿ ನಮಗೆ ಪುಣ್ಯ ಲಭಿಸುವುದಾಗಲಿ ಅಥವಾ ಜೀವನದಲ್ಲಿ ಮುಕ್ತಿ (ಜ್ಞಾನ) ಸಿಗುವುದಾಗಲಿ, ಅದು ಕೇವಲ ಗುರುವಿನ ಕೃಪೆಯಿಂದ ಮಾತ್ರ ಸಾಧ್ಯ.ಎಂದು ಹೇಳುವುದರ ಮೂಲಕ ಬದುಕಿನಲ್ಲಿ ಗುರುವಿನ ಪ್ರಾಮುಖ್ಯತೆ ತಿಳಿಸಿದ್ದಾರೆ

ಗುರು ಎಂಬುದು ಕೇವಲ ನಾಲ್ಕು ಗೋಡೆಗಳ ಮಧ್ಯೆ ಪಾಠ ಮಾಡುವ ವ್ಯಕ್ತಿಯಲ್ಲ ಕತ್ತಲೆಯನ್ನು ಸವರಿ ಬೆಳಕನ್ನು ನೀಡುವ ಒಂದು ಚೇತನ. "ಗುರು ಬ್ರಹ್ಮ ಗುರು ವಿಷ್ಣು" ಎಂಬ ಶ್ಲೋಕದಂತೆ, ನಮಗೆ ಜನ್ಮ ನೀಡಿದ ಪೋಷಕರು ಮೊದಲ ಗುರುವಾದರೆ, ಬದುಕುವ ದಾರಿಯನ್ನು ತೋರಿಸುವ ಶಿಕ್ಷಕರು ಎರಡನೇ ಗುರು. ಕಲ್ಲು ಬಂಡೆಯಂತಿರುವ ಪ್ರತಿ ವಿದ್ಯಾರ್ಥಿಯ ಭವಿಷ್ಯವನ್ನು ಕೆತ್ತಿ ಸುಂದರ ಮೂರ್ತಿಯನ್ನಾಗಿಸುವ ಶಿಲ್ಪಿ ಗುರು. ಅವರ ಮಾರ್ಗದರ್ಶನವಿಲ್ಲದೆ ಯಶಸ್ಸಿನ ಶಿಖರವನ್ನು ತಲುಪಲು ಸಾಧ್ಯವಿಲ್ಲ. ಆದ್ದರಿಂದ, ನಮ್ಮನ್ನು ಯೋಗ್ಯ ನಾಗರಿಕರನ್ನಾಗಿ ರೂಪಿಸಿದ ಸಂತೃಪ್ತಿ ಜೀವನ ರೂಪಿಸಿಕೊಳ್ಳಲು ದಾರಿದೀಪವಾದ ಪ್ರತಿಯೊಬ್ಬ ಗುರುಗಳಿಗೂ ನಾನು ಶಿರಬಾಗಿ ತಲೆ ಬಾಗುವೆ. ಗುರುವನು ಅನುದಿನ ನೆನೆಯೋಣ ಸುಂದರ ಬದುಕು ರೂಪಿಸಿದ್ದಕ್ಕೆ ಧನ್ಯವಾದಗಳನು ಸಲ್ಲಿಸೋಣ.

■ ಲೇಖನ
ಅವಿನಾಶ ಸೆರೆಮನಿ.
ಬೈಲಹೊಂಗಲ




# ಅಂಧಕಾರ ಅಳಿಸಿ ಸುಜ್ಞಾನದೆಡೆಗೆ ಕೊಂಡೊಯ್ಯುವವ ಗುರು

## ಇಂದು (ಜುಲೈ 29 ಬುಧವಾರ) "ಗುರು ಪೂರ್ಣಿಮೆ" ಅಂಗವಾಗಿ ಈ ವಿಶೇಷ ಲೇಖನ

■ ಉದಯರಶ್ಮಿ ದಿನಪತ್ರಿಕೆ

"ಸಂತನೆಂದರೆ ಯಾರು ದಿವ್ಯತೆಯ ಅರಿತವನು, ಸರಳತೆಯ ಸೂತ್ರದಲಿ ಸುಖವ ಕಂಡವನು, ಮಮತೆ ಬಂಧನ ಕಳಚಿ ಬಲು ದೂರ ನಿಂತವನು..." ಎಂಬ ಹಾಡನ್ನು ತಾವು ಕೇಳಿದಾಗ ಮನದಲ್ಲಿ ಭಕ್ತಿಯ ಭಾವ ಮೂಡಿ ಬಂದಿರಬಹುದು. ಆಷಾಢ ಮಾಸದ ಹುಣ್ಣಿಮೆಯಂದು ಜಗತ್ತಿನೆಲ್ಲೆಡೆ ಆಚರಿಸಲಾಗುವ ಈ ಗುರು ಪೂರ್ಣಿಮೆ ಕಾರ್ಯಕ್ರಮ ಮೂಲಕ ಶಿಷ್ಯರು ತಮ್ಮ ಗುರುಗಳಿಗೆ ಕೃತಜ್ಞತೆ ಮತ್ತು ಗೌರವ ಸಲ್ಲಿಸುತ್ತಾರೆ. ಗುರು-ಶಿಷ್ಯ ಪರಂಪರೆಯನ್ನು ಸ್ಮರಿಸುವ ಮತ್ತು ಮಾರ್ಗದರ್ಶನಕ್ಕಾಗಿ ಕೃತಜ್ಞತಾ ಭಾವ ವ್ಯಕ್ತಪಡಿಸುವ ಸುದಿನವೇ ಈ ಗುರು ಪೂರ್ಣಿಮೆ. ಗುರುವಿಗಿಂತ ಶ್ರೇಷ್ಠವಾದ ದೇವರಿಲ್ಲ. ಅಜ್ಞಾನವೆಂಬ ಅಂಧಕಾರದಿಂದ ಸುಜ್ಞಾನದೆಡೆಗೆ ಕೊಂಡೊಯ್ಯುವ ದಾರಿ ದೀಪವೇ ಗುರು. "ಗುರು ಬ್ರಹ್ಮ, ಗುರು ವಿಷ್ಣು, ಗುರುದೇವೋ ಮಹೇಶ್ವರ, ಗುರು ಸಾಕ್ಷಾತ್ ಪರಃಬ್ರಹ್ಮ, ತಸ್ಮೈಶ್ರೀ ಗುರುವೇ ನಮಃ" ಗುರುವಿನ ಮಹತ್ವವನ್ನು ಸಾರುವ ಈ ಶ್ಲೋಕದಂತೆ ನಮಗೆ ಗುರುವಿನ ಸ್ಥಾನವು ದೇವರಿಗೆ ಸಮನಾದದ್ದು ಎಂದು ಅರ್ಥೈಸುತ್ತದೆ. ಆಚಾರ್ಯ ದೇವೋ ಭವಃ ಎಂಬ ಸಂಸ್ಕೃತಿ ನಮ್ಮದು. ಜನ್ಮ ನೀಡಿದ ತಾಯಿ, ಬದುಕು ಕಲಿಸಿದ ತಂದೆ ಮತ್ತು ಕಲ್ಲಿನಂತಿರುವ ನಮಗೆ ಸಂಸ್ಕಾರ ನೀಡಿ ಶಿಲೆ ಅಥವಾ ಮೂರ್ತಿಗಳನ್ನಾಗಿ ರೂಪ ನೀಡಿದ ಗುರು ಈ ಮೂವರನ್ನು ಪೂಜ್ಯನೀಯ ಸ್ಥಾನದಲ್ಲಿಟ್ಟು ಗೌರವಿಸುವುದು ನಮ್ಮ ಭಾರತೀಯ ಸಂಸ್ಕೃತಿ ಮತ್ತು ಪರಂಪರೆಯಾಗಿದೆ. ಪ್ರತಿಯೊಬ್ಬರ ಬದುಕಿನಲ್ಲಿ ಗುರು ಇಲ್ಲದೇ ಯಾವುದೂ ಸಾಧ್ಯವಿಲ್ಲ.

ಗುರು ಎಂದರೆ ಅಜ್ಞಾನವೆಂಬ ಅಂಧಕಾರವನ್ನು ತೊಲಗಿಸಿ, ಸುಜ್ಞಾನವೆಂಬ ಜ್ಞಾನದ ಪ್ರಭೆಯನ್ನು ಬೆಳಗಿಸುವ ಮತ್ತು ಸನ್ಮಾರ್ಗದತ್ತ ಕೊಂಡೊಯ್ಯುವ ಮಹಾನ್ ಶಕ್ತಿ ಎಂದು ಹೇಳಬಹುದು. ಜ್ಞಾನ, ವಿವೇಕ ಮತ್ತು ಮಾರ್ಗದರ್ಶನ ನೀಡುತ್ತಾ, ಬದುಕಿನಲ್ಲಿ ಬೆಳಕು



ಚೆಲ್ಲಿದ ಮತ್ತು ದಾರಿ ತೋರಿದ ಶಿಕ್ಷಕರು ಮತ್ತು ಗುರುಗಳಿಗೆ ಸಲ್ಲಿಸುವ ಅಪ್ರತಿಮವಾದ ಗೌರವವನ್ನು ಸಲ್ಲಿಸಲು ಈ ಗುರು ಪೂರ್ಣಿಮೆಯನ್ನು ಅತ್ಯಂತ



ಧಾರ್ಮಿಕವಾಗಿ ಆಚರಿಸಲಾಗುತ್ತಿದೆ.

ಈ ದಿನದಂದು ಭಾರತದಲ್ಲಿ ವಿಶೇಷವಾಗಿ ತನ್ನ ಅಧ್ಯಾತ್ಮಿಕ ಅಥವಾ ಶೈಕ್ಷಣಿಕ ಗುರುಗಳ ನಮನಗಳನ್ನು ಸಲ್ಲಿಸಲಾಗುತ್ತದೆ. ಅಷ್ಟೇ ಅಲ್ಲ ನಮ್ಮ ದೇಶದ ಮಹಾಕಾವ್ಯಗಳಲ್ಲೊಂದಾದ ಮಹಾಭಾರತ ರಚಿಸಿದ ಮಹರ್ಷಿ ವೇದ ವ್ಯಾಸರ ಜನ್ಮದಿನವನ್ನು ಈ ದಿನದಂದೇ ಆಚರಿಸಲಾಗುತ್ತಿರುವುದು ಇನ್ನೊಂದು ವಿಶೇಷ.

ಈ ದಿನವು ಜ್ಞಾನ, ಬುದ್ಧಿವಂತಿಕೆ ಮತ್ತು ಗುರುವಿನಿಂದ ಶಿಷ್ಯನಿಗೆ ಅಧ್ಯಾತ್ಮಿಕ ಬೋಧಿಸಿದ ತತ್ವದ ಸಾರ-ಸಂದೇಶದ ಬಗ್ಗೆ ತಿಳಿಸಿಕೊಡುತ್ತದೆ.

ಆದ್ದರಿಂದ ರಾಷ್ಟ್ರಕ್ಕೆ ಉತ್ತಮ ನಾಗರೀಕರು ಮತ್ತು ಸತ್ಪ್ರಜೆಗಳನ್ನು ರೂಪಿಸುವಲ್ಲಿ ಗುರುವಿನ ಪಾತ್ರ ಅನನ್ಯ ಮತ್ತು ಮಹತ್ವಪೂರ್ಣವಾಗಿದೆ. ಶಿಕ್ಷಕರು ಕೇವಲ ಇಂದಿನ ಪೀಳಿಗೆಗೆ ಅಂಧಕಾರವೆಂಬ ಅಜ್ಞಾನವನ್ನು ಹೊಡೆದೋಡಿಸಿ ಜ್ಞಾನವೆಂಬ ಪ್ರಭೆಯನ್ನು ಬೆಳಗಲು ಹಾಗೂ ಎಲ್ಲೆಡೆ ಪಸರಿಸುವಂತೆ ಹಾಗೂ ವಿದ್ಯಾರ್ಥಿಯ ಸರ್ವಾಂಗೀಣ ಅಭಿವೃದ್ಧಿಯೊಂದಿಗೆ ವ್ಯಕ್ತಿತ್ವ ವಿಕಸನಗೊಳ್ಳುವಲ್ಲಿ ಭದ್ರ ಅಡಿಪಾಯ ಹಾಕುವವರೇ ಶಿಕ್ಷಕರು. ಅವರು ತಮ್ಮ ನಿಸ್ವಾರ್ಥ ಸೇವೆಯ ಮೂಲಕವೇ ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡುವದರ ಜೊತೆಗೆ ವಿದ್ಯಾರ್ಥಿಗಳಲ್ಲಿ ಸಂಸ್ಕೃತಿ-ಸಂಸ್ಕಾರ, ನಡೆ-ನುಡಿ, ಆಚಾರ-ವಿಚಾರ, ಪ್ರಾಮಾಣಿಕತೆ, ಕಾರ್ಯದಲ್ಲಿ ಶ್ರದ್ಧೆ, ಮಾನವೀಯ ಸಂಬಂಧಗಳು, ಜೀವನ ಮೌಲ್ಯಗಳು, ಆದರ್ಶ ಮತ್ತು ತತ್ವ-ಸಿದ್ಧಾಂತಗಳಂತಹ ಮೌಲ್ಯಗಳ ಧಾರಣೆ ಮಾಡಿ ಬದುಕು ಬಂಗಾರಮಯವನ್ನಾಗಿಸಲು ಕಾರ್ಯನಿರ್ವಹಿಸಬೇಕಾಗಿದೆ.

### ವಿಜಯಪುರದ ಜ್ಞಾನ ಯೋಗಾಶ್ರಮದಲ್ಲಿ ಗುರು ಪೂರ್ಣಿಮೆಯ ವಿಶೇಷತೆ:



ವಿಶೇಷವಾಗಿ ನಮ್ಮ ವಿಜಯಪುರದ ಜ್ಞಾನ ಯೋಗಾಶ್ರಮದಲ್ಲಿ ಗುರು ಪೂರ್ಣಿಮೆಯನ್ನು ಜುಲೈ 29 ರಂದು ಬಹಳ ಸಂಭ್ರಮ ಮತ್ತು ಭಕ್ತಿಯ ಪರಾಕಾಷ್ಠೆಯೊಂದಿಗೆ ಆಚರಿಸಲಾಗುತ್ತದೆ.


ಈ ಗುರು ಪೂರ್ಣಿಮೆಯ ದಿನದಂದು ನಡೆದಾಡುವ ದೇವರು, ನಾಡು ಕಂಡ ಶ್ರೇಷ್ಠ ಸಂತ ಪರಮ ಪೂಜ್ಯ ಶ್ರೀ ಸಿದ್ದೇಶ್ವರ ಬುದ್ಧೀಜಿ ಹಾಗೂ ಅವರ ಅಧ್ಯಾತ್ಮಿಕ ಗುರುಗಳಾಗಿದ್ದ ವೇದಾಂತ ಕೇಸರಿ ಶ್ರೀ ಮಲ್ಲಿಕಾರ್ಜುನ ಸ್ವಾಮೀಜಿಗಳ ಗದ್ದುಗೆಗೆ ಪೂಜೆ ಸಲ್ಲಿಸಲಾಗುತ್ತದೆ. ಮಕ್ಕಳು, ಯುವಕರು, ಮಹಿಳೆಯರು, ಹಿರಿಯರು ಸೇರಿದಂತೆ ಲಕ್ಷಾಂತರ ಭಕ್ತರು ಭಕ್ತಿ-ಭಾವದಿಂದ ಭಾವ ಪರವಶರಾಗಿ ತಮ್ಮ ಗುರುವರ್ಯರಿಗೆ ಗೌರವ ಪೂರ್ವಕ ನಮನಗಳನ್ನು ಸಲ್ಲಿಸುತ್ತಾರೆ.

ಸರಳತೆಯ ಪ್ರತೀಕ, ಸಜ್ಜನಿಕೆಯ ಸಾಕಾರ ಮೂರ್ತಿ, ನನ್ನದು-ತನ್ನದೆಂಬ ಮಮಕಾರ ತೊರೆದ ಮಹಾಪುರುಷ ಜ್ಞಾನ ಯೋಗಿ, ಜೇಬಿಲ್ಲದ ಅಂಗಿ ತೊಟ್ಟ ಸಂತ, ನಡೆದಾಡುವ ದೇವರೆಂದೇ ಹೆಸರುವಾಸಿಯಾಗಿದ್ದ ಪರಮ ಪೂಜ್ಯ ಶ್ರೀ ಸಿದ್ದೇಶ್ವರ ಬುದ್ಧೀಜಿಯವರು ತಮ್ಮ ಪ್ರವಚನಗಳ ಮೂಲಕವೇ ಜನರಿಗೆ ಅಧ್ಯಾತ್ಮಿಕ ಮತ್ತು ಜೀವನ ಸಂದೇಶಗಳ ಬೋಧಿಸುತ್ತಿದ್ದವರು. ಸಮಾಜವನ್ನು ತಿದ್ದುವ ಸ್ವಾಮೀಜಿಗಳು ಹೇಗಿರಬೇಕು ಎನ್ನುವುದಕ್ಕೆ ನಿದರ್ಶನವಾಗಿದ್ದರು. ಸದಾ ಪರಿಸರ, ಪ್ರಕೃತಿ, ಪ್ರಾಣಿ-ಪಕ್ಷಿ, ಗಿಡ-ಮರ ಮತ್ತು ನಿಸರ್ಗದ ಕೊಡುಗೆಗಳನ್ನು ಉದಾಹರಿಸುವದರ ಮೂಲಕವೇ ಅದೆಷ್ಟೋ ಜನರಿಗೆ ದಾರಿ ದೀಪವಾಗಿ ಜೀವನಕ್ಕೆ ಸ್ಪೂರ್ತಿಯಾಗಿದ್ದವರು. ಜ್ಞಾನ ದಾಸೋಹ ಮತ್ತು ಅನ್ನ ದಾಸೋಹದ ಮೂಲಕವೇ ಹೆಸರುವಾಸಿಯಾದ ಈ ಜ್ಞಾನ ಯೋಗಾಶ್ರಮದಲ್ಲಿ ನಿರಂತರವಾಗಿ ಅಧ್ಯಾತ್ಮಿಕ, ಧಾರ್ಮಿಕ ಕಾರ್ಯಕ್ರಮ ಮತ್ತು ಚಿಂತನಾಗೋಷ್ಠಿಗಳು ಜರುಗುತ್ತವೆ. ಮಹಾ ಪ್ರಸಾದ ಕಾರ್ಯಕ್ರಮದಲ್ಲಿ ಮಕ್ಕಳಿಂದ ಹಿಡಿದು ವೃದ್ಧರವರೆಗೂ ಎಲ್ಲರೂ ಸ್ವಯಂ ಸ್ಪೂರ್ತಿಯಿಂದ ಭಕ್ತಿಯ ಸೇವೆಯನ್ನು ಸಲ್ಲಿಸುತ್ತಾರೆ.

ಗುರು ಪೂರ್ಣಿಮೆಯ ದಿನದಂದು ಜೀವನದಲ್ಲಿ ಮಾತೃ ಹೃದಯದ ಪ್ರೀತಿ, ಕರುಣೆ, ತ್ಯಾಗ ಮತ್ತು ಜ್ಞಾನ, ಅನುಭವಗಳಿಂದ ಜೀವನದ ಸಾರ್ಥಕತೆಯ ಬಗ್ಗೆ ಬೋಧಿಸಿದ ಶ್ರೀ ಮಲ್ಲಿಕಾರ್ಜುನ ಸ್ವಾಮೀಜಿ ಹಾಗೂ ಶ್ರೀ ಸಿದ್ದೇಶ್ವರ ಸ್ವಾಮೀಜಿಗಳಿಗೆ ಜಿಲ್ಲೆಯ ಹಲವಾರು ಸಂಘ-ಸಂಸ್ಥೆಗಳು, ಸ್ವಯಂ ಸೇವಾ ಸಂಸ್ಥೆಗಳು ಮತ್ತು ಮಹಿಳೆಯರು ಗೌರವ ಪೂರ್ವಕವಾದ ನಮನಗಳನ್ನು ಸಲ್ಲಿಸುತ್ತಾರೆ. ಲಕ್ಷೋಪಲಕ್ಷ ಭಕ್ತರು ಗುರು ಪೂರ್ಣಿಮೆಯ ದಿನದಂದು ವಿಜಯಪುರದ ಜ್ಞಾನಯೋಗಾಶ್ರಮದಲ್ಲಿ ಇಡೀ ಜಗತ್ತಿಗೆ ಅಧ್ಯಾತ್ಮ ಜ್ಞಾನಧಾರೆಯ ಮೂಲಕ ಬೆಳಕು ಚೆಲ್ಲಿದ ನಡೆದಾಡುವ ದೇವರೆಂದೇ ಹೆಸರುವಾಸಿಯಾಗಿದ್ದ ಶ್ರೀ ಸಿದ್ದೇಶ್ವರ ಸ್ವಾಮೀಜಿ ಹಾಗೂ ಅವರ ಗುರುಗಳಾಗಿದ್ದ ವೇದಾಂತ ಕೇಸರಿ ಶ್ರೀ ಮಲ್ಲಿಕಾರ್ಜುನ ಸ್ವಾಮಿಗಳ ಗದ್ದುಗೆಗೆ ಭಕ್ತಿ-ಭಾವದೊಂದಿಗೆ ನಮನಗಳನ್ನು ಸಲ್ಲಿಸುತ್ತಿರುವ ಒಂದು ವಿಶೇಷತೆಯಾಗಿದೆ.

ಕೊನೆಯ ನುಡಿ

ಅಲ್ಲಮ ಪ್ರಭು ಅವರ ವಚನದಲ್ಲಿ "ಗುರುವಿಡಿದ ಅರಿವು ಅರಿವಲ್ಲ, ಲಿಂಗವಿಡಿದ ಅರಿವು ಅರಿವಲ್ಲ, ಇಲ್ಲದ ಗುರು ಇಲ್ಲದ ಲಿಂಗ, ಕಲ್ಪಿತಕ್ಕೆ ಅರಿವಹುದೆ? ತನ್ನಿಂದ ತಾನರಿವುದೆ ಅರಿವು ಗುಹೇಶ್ವರಾ... ಎಂಬ ವಚನದಂತೆ, ಗುರುವೆಂದರೆ ಕೇವಲ ಶಿಕ್ಷಕರಷ್ಟೇ ಅಲ್ಲ. ಜ್ಞಾನದಿಂದ ನಮ್ಮ ಹಾದಿಯನ್ನು ಬೆಳಗಿಸುವ ಶಕ್ತಿಯ ಚಿಲುಮೆಯೇ ಗುರು. ಜೀವನದಲ್ಲಿ ಸರಿಯಾದ ದಾರಿ ತೋರುವ ಪ್ರತಿಯೊಬ್ಬರೂ ಗುರುಗಳೇ. ಅದಕ್ಕಾಗಿ ಜೀವನದಲ್ಲಿ ಸಾರ್ಥಕ್ಯ ಪಡೆಯಲು ಗುರು ಅವಶ್ಯ ಮತ್ತು ತನ್ನ ಅರಿವೇ ಗುರುವಾಗಬೇಕು ಎಂದು ಉಲ್ಲೇಖಿಗೊಂಡಿದೆ. ನಮ್ಮ ಜೀವನದ ಗುರಿ ನಿರ್ಧರಿಸಲು ನೆರವಾಗಿ ಸಾಧನೆಗೆ ಗೌರವದ ಗರಿಯಾದ ಎಲ್ಲ ಗುರುವರ್ಯರಿಗೆ ಹೃದಯಪೂರ್ವಕ ಮತ್ತು ಭಕ್ತಿ-ಭಾವದಿಂದ ಸಲ್ಲಿಸುವ ಕೃತಜ್ಞತೆಯಾಗಿದೆ. ಗುರುಗಳನ್ನು ಪೂಜಿಸುವ, ಗೌರವಿಸುವ ಕಾರ್ಯವು ದೈನಂದಿನವಾಗಿ ನಡೆಯಬೇಕು. ನಮ್ಮ ಬದುಕು-ಭವಿಷ್ಯ ರೂಪಿಸಿ ನಮ್ಮನ್ನು ಸನ್ಮಾರ್ಗದತ್ತ ಮುನ್ನಡೆಸುವ





ಮತ್ತು ದಾರಿ ತೋರುವ ಗುರುವಿನ ಸ್ಮರಣೆ ಸದಾಕಾಲ ಮಾಡುವಂತಾಗಲಿ. ಗುರು ಪೂರ್ಣಿಮೆ ದಿನದಂದು ಮಾತ್ರ ಗುರುವಿಗೆ ಕೃತಜ್ಞತೆ ಸಲ್ಲಿಸುವಂತಾಗಬಾರದು. ನಮ್ಮ ಬದುಕಿಗೆ ದಾರಿ ತೋರಿದ ಗುರುಗಳಿಗೆ ಪ್ರತಿನಿತ್ಯ ಗೌರವಿಸುವಂತಾಗಬೇಕು.

ಲೇಖನ
– ಮಲ್ಲಪ್ಪ. ಸಿ. ಖೊದ್ನಾಪೂರ
(ತಿಕೋಟಾ)
ವಿಜಯಪುರ



---



ಬಿಎಲ್‌ಡಿಇ ಸಂಸ್ಥೆಯ ಸಂಸ್ಥಾಪಕರಿಗೆ ಗೌರವ ನಮನ । ಪ್ರೊ.ತೋಳನೂರ ಹೇಳಿಕೆ

## ಉಕ ಜ್ಞಾನದಾಹ ತೀರಿಸಿದ ನಾಯಕ ಬಿ.ಎಂ.ಪಾಟೀಲ

■ ಉದಯರಶ್ಮಿ ದಿನಪತ್ರಿಕೆ

ತಿಕೋಟಾ: ಬಿ.ಎಲ್.ಡಿ.ಇ ಸಂಸ್ಥೆಯ ಸಂಸ್ಥಾಪಕರಾದ ಬಿ.ಎಂ. ಪಾಟೀಲ ಅವರ ಪುಣ್ಯಸ್ಮರಣೆಯನ್ನು ತಿಕೋಟಾದ ಬಿ.ಎಲ್.ಡಿ.ಇ ಸಂಸ್ಥೆಯ ನೂತನ ಕಲಾ ಮಹಾವಿದ್ಯಾಲಯದಲ್ಲಿ ಸೋಮವಾರ ಅತ್ಯಂತ ಗೌರವ ಮತ್ತು ಶ್ರದ್ಧಾಭಕ್ತಿಗಳಿಂದ ಆಚರಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಪ್ರಾಂಶುಪಾಲರಾದ ಶ್ರೀ ಪಿ. ಎಸ್. ತೋಳನೂರ ಅವರು ಬಿ. ಎಂ. ಪಾಟೀಲ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಗೌರವ ಸಲ್ಲಿಸಿದರು.

ನಂತರ ಅವರು ಮಾತನಾಡಿ,

ಶಿಕ್ಷಣ ಮತ್ತು ಸಮಾಜಕ್ಕೆ ಬಿ.ಎಂ.ಪಾಟೀಲರು ನೀಡಿದ ಮಹತ್ತರ ಕೊಡುಗೆಗಳನ್ನು ಸ್ಮರಿಸಿದರು.

ಪಾಟೀಲರು ದೂರದೃಷ್ಟಿಯ ಶಿಕ್ಷಣತಜ್ಞ, ದಾನಿ ಮತ್ತು ಸಂಸ್ಥೆಗಳ ನಿರ್ಮಾತೃವಾಗಿದ್ದರು ಎಂದು ಬಣ್ಣಿಸಿದರು. ತಲೆಮಾರುಗಳ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣವನ್ನು ನೀಡುವುದು ಮತ್ತು ಅವರನ್ನು ಸಬಲೀಕರಣಗೊಳಿಸುವುದು ಅವರ ಜೀವನದ ಮುಖ್ಯ ಉದ್ದೇಶವಾಗಿತ್ತು ಎಂದರು. ಬಿಎಲ್‌ಡಿಇ ಸಂಸ್ಥೆಗಳ ಇಂದಿನ ಭವ್ಯ ಬೆಳವಣಿಗೆಗೆ ಪಾಟೀಲರ ದೂರದೃಷ್ಟಿ, ಸಮರ್ಪಣಾ ಭಾವ ಮತ್ತು ನಿಸ್ವಾರ್ಥ ಸೇವೆಗೆ ಹೆಮ್ಮರವಾಗಿ ಬೆಳೆದ ಈ ಸಂಸ್ಥೆ ಜೀವಂತ ಸಾಕ್ಷಿಯಾಗಿದೆ ಎಂದು ಅವರು ಪ್ರತಿಪಾದಿಸಿದರು. ಇದಕ್ಕೂ ಮುನ್ನ, ಡಾ. ಪಾಟೀಲರ ಜೀವನ ಸಾಧನೆಗಳ ಬಗೆಗೆ ಪ್ರಾಧ್ಯಾಪಕ ಡಾ.ರವೀಚಂದ್ರ ವಾಲೀಕಾರ ಅವರು ಮಾತನಾಡಿ, ಸ್ಪೂರ್ತಿದಾಯಕ ಜೀವನ, ಶೈಕ್ಷಣಿಕ ಉತ್ಕೃಷ್ಟತೆಗೆ ಬಿ.ಎಂ.ಪಾಟೀಲರ

ಬದ್ಧತೆ, ಮಾದರಿ ನಾಯಕತ್ವ ಮತ್ತು ಮಾನವೀಯ ಮೌಲ್ಯಗಳು ಇತರರಿಗೂ ಮಾದರಿಯಾಗಿವೆ ಎಂದರು. ಪ್ರಾಧ್ಯಾಪಕ ಡಾ.ಸಂತೋಷ ಬಿ. ನವಲಗುಂದ ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಂಶುಪಾಲ ಪ್ರೊ.ಪಿ.ಎಸ್.ತೋಳನೂರ, ಕಚೇರಿ ಅಧೀಕ್ಷಕ ಎಸ್.ಪಿ.ಪಾಟೀಲ, ಕಾಲೇಜಿನ ಎಲ್ಲಾ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿ ಗೌರವ ನಮನ ಸಲ್ಲಿಸಿದರು.

---



## ಮೆಣಸಿನ ಬೆಳೆ ಉಳಿಸಲು ರೈತ ಶಿವಾನಂದ ಹರಸಾಹಸ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ಮತಕ್ಷೇತ್ರದ ಆಲಮೇಲದ ಜಮೀನಿನಲ್ಲಿ ಬೆಳೆದಿರುವ ಮೆಣಸಿನ ಸಸಿಗಳನ್ನು ಉಳಿಸಿಕೊಳ್ಳಲು ಬ್ಯಾರಲ್‌ನಲ್ಲಿ ನೀರನ್ನು ಸಂಗ್ರಹಿಸಿ ತಂಬಿಗೆಯ ಮೂಲಕ ಒಂದೊಂದೇ ಸಸಿಗೆ ರೈತ ಶಿವಾನಂದ ಅಮರಗೊಂಡ ನೀರುಣಿಸಲಾಗುತ್ತಿದ್ದಾರೆ.

ಮಳೆ ಕೈಕೊಟ್ಟ ಪರಿಣಾಮ ಕೃಷಿ ವೆಚ್ಚ ಹೆಚ್ಚಾದ ಕಾರಣ ಸಸಿಗಳು ಒಣಗದಂತೆ ಬದುಕಿಸಲು ಹೀಗೆ ಮಾಡುವುದು ಅನಿವಾರ್ಯವಾಗಿದೆ. ಇನ್ನೇನು ಮಳೆಯಾಗಬಹುದು ಎಂಬ ನಿರೀಕ್ಷೆಯಲ್ಲಿ ಅಲ್ಪಸ್ವಲ್ಪ ಸುರಿದ ಮಳೆಯನ್ನು ನಂಬಿ ಮೆಣಸಿನಕಾಯಿ ಸೇರಿದಂತೆ ವಿವಿಧ ಬೆಳೆಗಳನ್ನು ಬಿತ್ತನೆ ಮಾಡಿದ್ದ ರೈತರಿಗೆ ಇದೀಗ ಮಳೆಯ ಕೊರತೆ ದೊಡ್ಡ ಸಮಸ್ಯೆಯಾಗಿದೆ. ಬಿಸಿಲಿನ ತಾಪಕ್ಕೆ ಹೊಲದಲ್ಲಿನ ಸಸಿಗಳು ಬಾಡಲಾರಂಭಿಸಿದ್ದು, ಬೆಳೆ ಉಳಿಸಿಕೊಳ್ಳಲು ರೈತರು ಹರಸಾಹಸ ಪಡುತ್ತಿದ್ದಾರೆ. ಮೆಣಸಿನಕಾಯಿ ಸೇರಿದಂತೆ ವಿವಿಧ ಬೆಳೆಗಳನ್ನು ಬಿತ್ತಿದ ರೈತರು ಈಗ ಆತಂಕದಲ್ಲಿದ್ದಾರೆ. ಬೆಳೆ ಉಳಿಸಿಕೊಳ್ಳಲು ಸಾಧ್ಯವಾಗದೆ ಕಂಗಾಲಾಗಿರುವ ರೈತರ ಪರಿಸ್ಥಿತಿ ದೇವರೇ ಬಲ್ಲ ಎನ್ನುವಂತಾಗಿ ಅನ್ನದಾತನ ಶ್ರಮಕ್ಕೆ ತಕ್ಕ ಪ್ರತಿಫಲ ಸಿಗುವಂತೆ ವರುಣ ದೇವ ಕೃಪೆ ತೋರಿ ರೈತರ ಕಣ್ಣೀರನ್ನು ಒರೆಸಲಿ ಎಂಬುದು ಸಾರ್ವಜನಿಕರ ಆಶಯವಾಗಿದೆ.

---

ಆಷಾಢದ ವಿಶೇಷ । ಮಣ್ಣಿನ ಮಹತ್ವ ಸಾರುವ ಉದ್ದೇಶ । ಮಹಿಳೆಯರು & ರೈತ ಕುಟುಂಬಗಳಿಂದ ಗುಳ್ಳವ್ವನ ಪ್ರತಿಷ್ಠಾಪನೆ

## ಜನಪದ ಸಂಸ್ಕೃತಿಯ ಪ್ರತೀಕ ಗುಳ್ಳವ್ವನ ಹಬ್ಬದ ಸಂಭ್ರಮ

■ ಉದಯರಶ್ಮಿ ದಿನಪತ್ರಿಕೆ

■ ವರದಿ: ಸಿದ್ರಾಮ್ ಎಮ್. ಇಟ್ಟಿ

ಬಾಗಲಕೋಟೆ (ಜಮಖಂಡಿ): ಆಷಾಢ ಮಾಸದ ಪ್ರತಿ ಮಂಗಳವಾರ ಉತ್ತರ ಕರ್ನಾಟಕದ ಗ್ರಾಮೀಣ ಭಾಗಗಳಲ್ಲಿ ಆಚರಿಸಲಾಗುವ ಗುಳ್ಳವ್ವನ ಹಬ್ಬ ಇಂದಿಗೂ ತನ್ನ ಸಂಪ್ರದಾಯ, ಸಂಸ್ಕೃತಿ ಮತ್ತು ಜನಪದ ವೈಶಿಷ್ಟ್ಯವನ್ನು ಉಳಿಸಿಕೊಂಡು ಬಂದಿರುವ ಅಪರೂಪದ ಆಚರಣೆಯಾಗಿದೆ. ಆಧುನಿಕತೆ, ನಗರೀಕರಣ ಮತ್ತು ಜಾಗತೀಕರಣದ ಪ್ರಭಾವದ ನಡುವೆಯೂ ಗ್ರಾಮೀಣ ಬದುಕಿನ ಬೇರುಗಳನ್ನು ಗಟ್ಟಿಗೊಳಿಸಿರುವ ಈ ಹಬ್ಬ ಇದೀಗ ಗ್ರಾಮ-ಪಟ್ಟಣಗಳಲ್ಲೂ ಸಂಭ್ರಮದಿಂದ ಆಚರಿಸಲಾಗುತ್ತಿದೆ.

ರೈತನ ಬದುಕಿನ ಆಧಾರವಾಗಿರುವ ಭೂತಾಯಿಗೆ ಕೃತಜ್ಞತೆ ಸಲ್ಲಿಸುವ ಹಬ್ಬ ಎಂಬ ಹೆಗ್ಗಳಿಕೆಗೆ ಗುಳ್ಳವ್ವನ ಪೂಜೆ ಪಾತ್ರವಾಗಿದೆ. ಮಳೆಗಾಲ ಆರಂಭವಾಗಿ ಭೂಮಿ ಕೃಷಿಗೆ ಸಜ್ಜಾಗುವ ಈ ಸಂದರ್ಭದಲ್ಲಿ ಮಣ್ಣಿನ ಮಹತ್ವವನ್ನು ಸಾರುವ ಉದ್ದೇಶದಿಂದ ಮಹಿಳೆಯರು ಹಾಗೂ ರೈತ ಕುಟುಂಬಗಳು ಗುಳ್ಳವ್ವನನ್ನು ಪ್ರತಿಷ್ಠಾಪಿಸಿ ಪೂಜಿಸುತ್ತಾರೆ.

ಜನಪದ ಸಂಪ್ರದಾಯದ ಪ್ರಕಾರ, ವರ್ಷದಲ್ಲಿ ಮಣ್ಣಿಗೆ ಐದು ಬಾರಿ ವಿಶೇಷ ಪೂಜೆ ಸಲ್ಲಿಸಲಾಗುತ್ತದೆ. ಕಾರಹುಣ್ಣಿಮೆಯಂದು ಮಣ್ಣಿನ ಎತ್ತು, ಆಷಾಢದಲ್ಲಿ ಗುಳ್ಳವ್ವ, ನಾಗರ ಪಂಚಮಿಗೆ ಹುತ್ತದ ಪೂಜೆ, ಗಣೇಶ ಚತುರ್ಥಿಗೆ ಮಣ್ಣಿನ



ಗಣಪತಿ ಹಾಗೂ ಜೋಕುಮಾರ ಹಬ್ಬದ ಸಂದರ್ಭದಲ್ಲಿ ಗೌರವ್ವ-ಶೀಗವ್ವ ಪೂಜೆ ನಡೆಸುವ ಮೂಲಕ ಭೂಮಿಯ ಮೇಲಿನ ಕೃತಜ್ಞತೆಯನ್ನು ವ್ಯಕ್ತಪಡಿಸಲಾಗುತ್ತದೆ. ಈ ಸಂಪ್ರದಾಯ ರೈತರ ಪ್ರಕೃತಿ ಆರಾಧನೆಯ ಜೀವಂತ ಸಾಕ್ಷಿಯಾಗಿದೆ.

ಆಷಾಢದ ಮಂಗಳವಾರ ರಾತ್ರಿ ಮನೆಗಳಲ್ಲಿ ಗುಳ್ಳವ್ವನನ್ನು ಪ್ರತಿಷ್ಠಾಪಿಸಿ ಅರಿಶಿನ, ಕುಂಕುಮ, ಹೂವು, ಎಲೆ, ದೀಪ ಹಾಗೂ ನೈವೇದ್ಯಗಳಿಂದ ಭಕ್ತಿಪೂರ್ವಕವಾಗಿ ಪೂಜೆ ಸಲ್ಲಿಸಲಾಗುತ್ತದೆ. ಮರುದಿನ ಮಹಿಳೆಯರು ವಿವಿಧ ಬಗೆಯ ಅಡುಗೆಗಳನ್ನು ಸಿದ್ಧಪಡಿಸಿ, ಬುತ್ತಿ, ನೀರು ಹಾಗೂ ಪೂಜಾ ಸಾಮಗ್ರಿಗಳೊಂದಿಗೆ ಗುಳ್ಳವ್ವನನ್ನು ಮೆರವಣಿಗೆಯ ರೂಪದಲ್ಲಿ ನದಿ, ಹಳ್ಳ ಅಥವಾ ಕೆರೆಯ ದಡಕ್ಕೆ ಕರೆದೊಯ್ಯುತ್ತಾರೆ. ಅಲ್ಲಿ ಸಾಮಾನ್ಯವಾಗಿ ಬನ್ನಿ ಮರದ ನೆರಳಿನಲ್ಲಿ ಕೊನೆಯ ಪೂಜೆ ನೆರವೇರಿಸಿ, ತಂದಿರುವ ಬುತ್ತಿಯನ್ನು ಎಲ್ಲರೂ ಒಟ್ಟಾಗಿ ಹಂಚಿಕೊಂಡು ಊಟ ಮಾಡುತ್ತಾರೆ. ಬಳಿಕ ಗುಳ್ಳವ್ವನನ್ನು ನೀರಿನಲ್ಲಿ ವಿಸರ್ಜಿಸುವ ಮೂಲಕ ಹಬ್ಬಕ್ಕೆ ಪೂರ್ಣ ವಿರಾಮ ನೀಡಲಾಗುತ್ತದೆ.

ಗುಳ್ಳವ್ವನ ಹಬ್ಬವು ಕೇವಲ ಧಾರ್ಮಿಕ ಆಚರಣೆಯಲ್ಲ; ಅದು ಸಾಮೂಹಿಕತೆ, ಸಹಬಾಳ್ವೆ, ಪ್ರಕೃತಿ ಪ್ರೇಮ ಮತ್ತು ಮಹಿಳಾ ಸಂಸ್ಕೃತಿಯ ಪ್ರತೀಕವಾಗಿದೆ. ಈ ಹಬ್ಬದ ಮೂಲಕ ಮಕ್ಕಳು ಜನಪದ ಆಚರಣೆಗಳ ಪರಿಚಯ ಪಡೆಯುವುದರ ಜೊತೆಗೆ ಪ್ರಕೃತಿಯೊಂದಿಗೆ ಬೆರೆಯುವ ಬದುಕಿನ ಮೌಲ್ಯಗಳನ್ನು ಕಲಿಯುತ್ತಾರೆ.

### ಕೃಷಿ ಸಂಸ್ಕೃತಿಯ ಜೀವಂತ ರೂಪ

ಜನಪದ ತಜ್ಞರ ಪ್ರಕಾರ, "ಗುಳ್ಳವ್ವನ ಆರಾಧನೆ ಎಂದರೆ ಭೂಮಿಯನ್ನು ದೇವತೆಯಾಗಿ ಕಾಣುವ ಭಾರತೀಯ ಕೃಷಿ ಸಂಸ್ಕೃತಿಯ ಜೀವಂತ ರೂಪ. ಇದು ಪ್ರಕೃತಿಯೊಂದಿಗೆ ಮಾನವನ ಅವಿನಾಭಾವ ಸಂಬಂಧವನ್ನು ಸಾರುವ ಅಪರೂಪದ ಜನಪದ ಪರಂಪರೆಯಾಗಿದೆ." ಹೀಗಾಗಿ ಆಷಾಢದ ಗುಳ್ಳವ್ವನ ಹಬ್ಬವು ಕೇವಲ ಸಂಪ್ರದಾಯವಲ್ಲ; ಮಣ್ಣು, ಮಳೆ, ಪ್ರಕೃತಿ ಮತ್ತು ರೈತನ ಬದುಕನ್ನು ಗೌರವಿಸುವ ಕನ್ನಡ ನಾಡಿನ ಶ್ರೇಷ್ಠ ಜನಪದ ಪರಂಪರೆಯಾಗಿ ಇಂದಿಗೂ ತನ್ನ ವೈಭವವನ್ನು ಉಳಿಸಿಕೊಂಡಿದೆ.

ಇತ್ತೀಚಿನ ದಿನಗಳಲ್ಲಿ ನಗರ ಜೀವನದ ಪ್ರಭಾವದಿಂದ ಅನೇಕ ಜನಪದ ಆಚರಣೆಗಳು ಮರೆಯಾಗುತ್ತಿರುವ ಸಂದರ್ಭದಲ್ಲಿ, ಗುಳ್ಳವ್ವನ ಹಬ್ಬ ಮಾತ್ರ ಗ್ರಾಮೀಣ ಸಮಾಜದ ಸಹಕಾರ ಮತ್ತು ಹಿರಿಯರ ಮಾರ್ಗದರ್ಶನದಿಂದ ಇನ್ನೂ ಜೀವಂತವಾಗಿದೆ. ಹಲವೆಡೆ ಯುವ ಪೀಳಿಗೆಯೂ ಉತ್ಸಾಹದಿಂದ ಪಾಲ್ಗೊಳ್ಳುತ್ತಿರುವುದು ಈ ಸಂಪ್ರದಾಯದ ಉಳಿವಿಗೆ ಆಶಾದಾಯಕ ಬೆಳವಣಿಗೆಯಾಗಿದೆ.

---

## ವಿದ್ಯಾರ್ಥಿಗಳು ಮಾದಕ ವ್ಯಸನದಿಂದ ದೂರವಿರಬೇಕು : ಮೌನೇಶ

■ ಉದಯರಶ್ಮಿ ದಿನಪತ್ರಿಕೆ



ಕೆಂಭಾವಿ: ವಿದ್ಯಾರ್ಥಿಗಳು ಬುದ್ಧಿ, ಮನಸ್ಸು, ನಿಗ್ರಹಿಸಿಕೊಂಡು ಸುಸಂಸ್ಕೃತ ವ್ಯಕ್ತಿಯಾಗಿ ಸುಂದರ ಸಮಾಜ ನಿರ್ಮಾಣಕ್ಕೆ ಮುಂದಾಗಬೇಕು ಎಂದು ಎಎ ಮೌನೇಶ ಬಡಿಗೇರ ಹೇಳಿದರು.

ಶ್ರೀಮತಿ ಗಂಗೂಬಾಯಿ ಶಾಂತಗೌಡ ಪೋಲಿಸ್ ಪಾಟೀಲ್ ಮೆಮೋರಿಯಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ಯಾದಗಿರಿ ಜಿಲ್ಲಾ ಪೋಲಿಸ್ ಇಲಾಖೆ ಸಹಯೋಗದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಡ್ರಗ್ಸ್ ಮುಕ್ತ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಪದವಿ ಪೂರ್ವ ಹಾಗೂ ಪದವಿ ಈ ಐದು ವರ್ಷಗಳ ವಿದ್ಯಾರ್ಥಿಗಳಿಗೆ ಪಂಚವಾರ್ಷಿಕ ಯೋಜನೆ ಇದ್ದಂತೆ ಎಂದವರು. ಸದೃಢ ಆರೋಗ್ಯಕ್ಕಾಗಿ ಯುವ ಜನತೆ ಗುಟ್ಕಾ, ಮಟ್ಕಾ, ಜೂಜಾಟ, ಆಲ್ಕೋಹಾಲ್, ಸಿಗರೇಟು, ಡ್ರಗ್ಸ್, ಗಾಂಜಾ, ವ್ಯಸನಿಗಳಾಗಬೇಡಿ ಎಂದು ಕರೆ ನೀಡಿದರು.

ಪೋಲಿಸ್ ಕಾನ್ಸ್ಟೇಬಲ್ ರೇಖಾ ಮಾತನಾಡಿ, ಯುವ ಪೀಳಿಗೆ ದುಶ್ಚಟಗಳಿಂದ ದೂರವಿದ್ದು ಓದಿನ ಕಡೆ ಗಮನ ಹರಿಸಿ ದೊಡ್ಡ ದೊಡ್ಡ ಹುದ್ದೆಗಳನ್ನು ಪಡೆಯುವಂತೆ ಸಲಹೆ ನೀಡಿದ ಅವರು, ಯುವಕರು ಮಾದಕ ವಸ್ತುಗಳ ಸೇವನೆಯಿಂದ ದೂರವಿದ್ದಾಗ ಸುಶಿಕ್ಷಿತ, ಸಶಕ್ತ, ಸ್ವಾಸ್ಥ್ಯ ಸಮಾಜ ನಿರ್ಮಾಣ ಮಾಡಲು ಸಾಧ್ಯವಿದೆ ಎಂದರು.

ಕನ್ನಡ ವಿಭಾಗದ ಮುಖ್ಯಸ್ಥ ಮಲ್ಲಿಕಾರ್ಜುನ ಮರಡ್ಡಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಉಪನ್ಯಾಸಕಿಯರಾದ ಡಾ ಪೂಜಾ ಹೊನ್ನುಟಗಿ, ನಸ್ರೀನ್ ತಾಜ್, ಸುಮಾ, ಉಪನ್ಯಾಸಕ ಡಾ ಯಂಕನಗೌಡ ಪಾಟೀಲ್, ಶರಣಪ್ಪ ಸಾಹು, ಪೋಲಿಸ್ ಕಾನ್ಸ್ಟೇಬಲ್ ನಿಂಗನಗೌಡ, ಹೋಮ್ ಗಾರ್ಡ್ ಮುರ್ತುಜಾ ಚಿಗರಾಳ, ಬೋಧಕೇತರ ಸಿಬ್ಬಂದಿ ಸಂಗಮೇಶ ಪಟ್ಟಣಕರ್, ಮಾಸುಮ ಅಲಿ ನಾಶಿ ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# 17,38,587 ಗಣತಿ ನಮೂನೆ ಗಣಕೀಕರಣ :ಡಿಸಿ ಡಾ.ಆನಂದ ಕೆ.



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯಾದ್ಯಂತ ಮತದಾರರ ಪಟ್ಟಿ ಪರಿಶೀಲನೆ ಕಾರ್ಯ ಜಾರಿಯಲ್ಲಿದ್ದು, ಜಿಲ್ಲೆಯ ಒಟ್ಟು 19,82,114 ಮತದಾರ-ರಿಗೆ ಮತಗಟ್ಟೆ ಅಧಿಕಾರಿಗಳು ಮನೆ ಮನೆಗೆ ತೆರಳಿ ಗಣತಿ ನಮೂನೆ ವಿತರಿಸಿದ್ದು, ಈ ಪೈಕಿ ಭರ್ತಿ ಮಾಡಿದ 17,38,587 ಗಣತಿ ನಮೂನೆಗಳನ್ನು ಈಗಾಗಲೇ ಸ್ವೀಕರಿಸಿ ಗಣಕೀಕರಣಗೊಳಿಸಲಾಗಿದೆ ಎಂದು ಜಿಲ್ಲಾಧಿಕಾ-ರಿಗಳಾದ ಡಾ. ಆನಂದ ಕೆ. ಅವರು ತಿಳಿಸಿದ್ದಾರೆ.

ಗೈರು, ವಲಸೆ, ಮರಣ ಮತದಾರರ ವಿವರ: ಮನೆ ಮನೆ ಭೇಟಿ ವೇಳೆ ಕಂಡುಬಂದ ಗೈರುಹಾಜರಿ, ವಲಸೆ, ಮರಣ,ಡುಪ್ಲಿಕೇಟ್ ಹಾಗೂ ಇತರೇ ಸೇ-ರಿದಂತೆ ಒಟ್ಟು 1,76,352 ಮತದಾರರ ವಿವರವಾದ ಪಟ್ಟಿ ಸಿದ್ಧಪಡಿಸಲಾಗಿದೆ.

ವಿಧಾನಸಭಾ ಕ್ಷೇತ್ರವಾರು ವಿವರ: ವಿಜಯಪುರ ನಗರ: 49,667, ಮುದ್ದೇಬಿಹಾಳ: 26,457, ಇಂಡಿ: 20,809, ದೇವರ ಹಿಪ್ಪರಗಿ: 20,249, ನಾಗಠಾಣ: 18,155, ಸಿಂದಗಿ: 17,752, ಬಸವನ ಬಾಗೇವಾಡಿ: 12,527, ಬಬಲೇಶ್ವರ: 10,736 ಸೇ-ರಿದಂತೆ ಒಟ್ಟು 1,76,352 ಮತದಾರರ ವಿವರವಾದ ಪಟ್ಟಿ ಸಿದ್ಧಪಡಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಆಕ್ಷೇಪಣೆ ಸಲ್ಲಿಸಲು ಅವಕಾಶ: ಕ್ಷೇತ್ರವಾರು ಸಿದ್ಧಪಡಿಸಲಾದ ಮತದಾರರ (ಎಎಸ್‌ಡಿಡಿಒ) ಪಟ್ಟಿಯನ್ನು ಆಯಾ ಮತಗಟ್ಟೆ ಅಧಿಕಾರಿಗಳು, ಮತಗಟ್ಟೆ ಏಜೆಂಟ-ರುಗಳಿಗೆ ನೀಡಲಾಗಿದೆ. ಸಾರ್ವಜನಿಕರು ವಿಜಯಪುರ ಜಿಲ್ಲಾ ವೆಬ್ ಸೈಟ್ :ತು-ರಿಚಿಥಿಚಿಠಿಣಡಿಚಿ.ಟುಥಿ.ಏಟಿ ಅಥವಾ ನೀಡಲಾಗಿರುವ ಗೂಗಲ್ ಡ್ರೈವ್ ಲಿಂಕ್ ಮೂಲಕ ಈ ಪಟ್ಟಿ ಪರಿಶೀಲಿಸಬಹುದಾಗಿದೆ ಎಂದು ಜಿಲ್ಲಾಧಿಕಾ-ರಿಗಳು ತಿಳಿಸಿದ್ದಾರೆ. https://drive.google.com/drive/folders/1TxCRel70q_-ws-rI8LDr_2KueAE95UyqW (ಎಎಸ್‌ಡಿ-ಡಿಒ) ಪಟ್ಟಿಗೆ ಸಂಬಂಧಿಸಿದಂತೆ ಮತದಾರ ನೋಂದಣಾಧಿಕಾರಿಗಳಿಗೆ ಮಾಹಿತಿ ನೀಡಲು ಅ.8 ರವರೆಗೆ ಅವಕಾಶ ಕಲ್ಪಿಸಲಾಗಿದೆ. ಬಳಿಕ ಆಗಸ್ಟ್.17 ರಿಂದ ಸೆ.16 ರವರೆಗೆ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶವಿದೆ ಎಂದು ಅವರು ತಿಳಿಸಿದ್ದಾರೆ.

ಜಿಲ್ಲೆಯ ಎಲ್ಲಾ ಮತದಾರರು ಹಾಗೂ ರಾಜಕೀಯ ಪಕ್ಷಗಳು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

## ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಅಭಿಮತ

# ತಂತ್ರಜ್ಞಾನ, ಮಾನವೀಯ ಮೌಲ್ಯಗಳು ಒಂದಾದಾಗ ಸಮಗ್ರ ಅಭಿವೃದ್ಧಿ ಸಾಧ್ಯ

■ ಉದಯರಶ್ಮಿ ದಿನಪತ್ರಿಕೆ



ಚಿಕ್ಕಬಳ್ಳಾಪುರ(ಮುದ್ದೇನಹಳ್ಳಿ)/ಬೆಂಗಳೂರು: ಕೃತಕ ಬುದ್ಧಿಮತ್ತೆ (ಂಡಿಣುಜಿ-ಛಿಚಿಟ ಋಟಿಣಜಟಟುಂಜಟಿಛಿಜ-ಂಋ) ರೂಪದ ಆಧುನಿಕ ತಂತ್ರಜ್ಞಾನವು ಕೇವಲ ನಗರ ಪ್ರದೇಶಗಳಿಗೆ ಸೀಮಿತವಾಗದೆ, ಗ್ರಾಮೀಣ ಭಾಗದ ಪ್ರತಿಯೊಬ್ಬ ಪ್ರತಿಭಾವಂತ ಯುವಕ-ಯುವತಿಯ-ರಿಗೂ ತಲುಪಿದಾಗ ಮಾತ್ರ ದೇಶದ ನೈಜ ಅಭಿವೃದ್ಧಿ ಸಾಧ್ಯ ಎಂದು ಸರ್ಕಾರದ ಮುಖ್ಯ ಕಾರ್ಯದರ್ಶಿಗಳಾದ ಡಾ. ಶಾಲಿನಿ ರಜನೀಶ್, ಐ.ಎ.ಎಸ್. ತಿಳಿಸಿದರು.

ಅವರು ಇಂದು ಚಿಕ್ಕಬಳ್ಳಾಪುರ ತಾಲೂಕಿನ ಮುದ್ದೇನಹಳ್ಳಿಯ 'ಸತ್ಯಸಾಯಿ ಗ್ರಾಮ'ದಲ್ಲಿ ಏರ್ಪಡಿಸಲಾಗಿದ್ದ 'ರೂರಲ್ ಶೋರ್ಸ್ ಎಐ ಕೌಶಲ್ಯ ಮತ್ತು ಅನುಭವ ಕೇಂದ್ರ' (RuralShores AI Skilling and Experience Centre) ಉದ್ಘಾಟನಾ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡುತ್ತಾ, "ತಂತ್ರಜ್ಞಾನವು ವೇಗವಾಗಿ ಬೆಳೆಯುತ್ತಿರುವ ಈ ಕಾಲಘಟ್ಟದಲ್ಲಿ ಎಐ ನಂತಹ ಆಧು-ನಿಕ ತಂತ್ರಜ್ಞಾನಕ್ಕೆ ಕರುಣೆ, ನೈತಿಕತೆ ಮತ್ತು ಸದ್ಗುಣಗಳ ಸ್ಪರ್ಶವಿರಬೇಕು.

ತಂತ್ರಜ್ಞಾನವು ಮಾನವನ ಬುದ್ಧಿವಂತಿಕೆ ಮತ್ತು ಸದ್ಗುಣಗಳನ್ನು ಹೆಚ್ಚಿಸುವಂತಿರಬೇಕು. ಸತ್ಯಸಾಯಿ ಗ್ರಾಮದಂತಹ ಪವಿತ್ರ ಹಾಗೂ ಸೇವಾ ಮನೋಭಾವದ ವಾತಾವರಣದಲ್ಲಿ ಈ ಕೇಂದ್ರ ಪ್ರಾರಂಭವಾಗಿರುವುದು ಅತ್ಯಂತ ಸೂಕ್ತವಾಗಿದೆ," ಎಂದು ಅಭಿಪ್ರಾಯಪಟ್ಟರು.

ಗ್ರಾಮೀಣ ಯುವಕರ ಸಬಲೀಕರಣ: "ರೂರಲ್ ಶೋರ್ಸ್ ಸಂಸ್ಥೆಯು ಕಳೆದ 18 ವರ್ಷಗಳಿಂದ ಗ್ರಾಮೀಣ ಭಾಗದ ಯುವಜನರು ಉದ್ಯೋಗ ಅರಸಿ ನಗರಗಳಿಗೆ ವಲಸೆ ಹೋಗುವುದನ್ನು ತಪ್ಪಿಸಿ, ಅವರು ಇದ್ದಲ್ಲಿಯೇ ಉದ್ಯೋಗಾವಕಾಶ ಕಲ್ಪಿಸುತ್ತಿರುವುದು ಶ್ಲಾಘನೀಯ.

ಈವರೆಗೆ ಸುಮಾರು 30,000ಕ್ಕೂ ಹೆಚ್ಚು ಯುವಕ-ಯುವತಿಯರಿಗೆ ತರಬೇತಿ ಹಾಗೂ ಉದ್ಯೋಗಾವಕಾಶ ನೀಡಿರುವುದು ಮತ್ತು ಅಮೆರಿಕದಲ್ಲೂ 'ಪೀಪಲ್‌ಶೋರ್ಸ್' ಮೂಲಕ ಸುಮಾರು 500 ಯುವತಿಯರು/ಮಹಿಳೆಯರಿಗೆ ಉದ್ಯೋಗ ನೀಡುತ್ತಿರುವುದು ಹೆಮ್ಮೆಯ ವಿಷಯ," ಎಂದರು.

ಸದ್ಗುರು ಶ್ರೀ ಮಧುಸೂದನ ಸಾಯಿ ಅವರ ಸೇವೆಗೆ ಶ್ಲಾಘನೆ: "ಉಚಿತ ಶಿಕ್ಷಣ, ಉಚಿತ ಆರೋಗ್ಯ ಮತ್ತು ಪೌಷ್ಟಿಕ ಆಹಾರ ಒದಗಿಸುವುದು ಪ್ರತಿಯೊಬ್ಬರ ಮೂಲಭೂತ ಹಕ್ಕು ಎಂಬ ತತ್ವದಡಿ ಕಾರ್ಯನಿರ್ವಹಿಸುತ್ತಿರುವ ಸದ್ಗುರು ಶ್ರೀ ಮಧುಸೂದನ ಸಾಯಿ ಅವರ ಮಾರ್ಗದರ್ಶನದ ಸೇವಾ ಕಾರ್ಯಗಳು ಅದ್ಭುತವಾಗಿವೆ. ಭಾರತದ ಪ್ರಥಮ ಸಂಪೂರ್ಣ ಉಚಿತ ಗ್ರಾಮೀಣ ವೈದ್ಯಕೀಯ ಕಾಲೇಜು (ಶ್ರೀ ಮಧುಸೂದನ ಸಾಯಿ ಇನ್‌ಸ್ಟಿಟ್ಯೂಟ್ ಆಫ್ ಮೆಡಿಕಲ್ ಸೈನ್ಸಸ್) ಸೇರಿದಂತೆ ಅನೇಕ ಯೋಜನೆಗಳು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ತಲುಪುತ್ತಿರುವುದು ಮಾದರಿಯಾಗಿದೆ," ಎಂದು ತಿಳಿಸಿದರು.

ತಂತ್ರಜ್ಞಾನ ರಾಜಧಾನಿಯಾಗಿ ಕರ್ನಾಟಕದ ಕೊಡುಗೆ: "ಕರ್ನಾಟಕವು ದೇಶದ ತಂತ್ರಜ್ಞಾನ ರಾಜಧಾನಿಯಾಗಿ ಬೆಳೆಯುತ್ತಿದ್ದು, ಇಂತಹ ಎಐ ಕೌಶಲ್ಯ ಕೇಂದ್ರಗಳು ಗ್ರಾಮೀಣ ಯುವಕರನ್ನು ಭವಿಷ್ಯದ ತಂತ್ರಜ್ಞಾನಕ್ಕೆ ಸಜ್ಜುಗೊಳಿಸಲಿವೆ. ಭಾರತವು ಜಾಗತಿಕ ತಂತ್ರಜ್ಞಾನ ಕ್ಷೇತ್ರದಲ್ಲಿ ನಾಯಕತ್ವ ವಹಿಸಲು ಗ್ರಾಮೀಣ ಭಾಗದ ಪ್ರತಿಭೆಗಳ ಕೊಡುಗೆ ಅಪಾರವಾಗಲಿದೆ," ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಸದ್ಗುರು ಶ್ರೀ ಮಧುಸೂದನ ಸಾಯಿ ಜಿ, ರೂರಲ್ ಶೋರ್ಸ್ ಸಂಸ್ಥೆಯ ನಿರ್ದೇಶಕರು, ಗಣ್ಯರು, ದೇಶ-ವಿದೇಶಗಳ ಭಕ್ತಾದಿಗಳು ಹಾಗೂ ನೂರಾರು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಮಹಾಬಳೇಶ್ವರಕ್ಕೆ ಗಂಗಾಪೂಜೆಗೆ ಬೆಳ್ಳುಬ್ಬಿ ನೇತೃತ್ವದಲ್ಲಿ ರೈತರ ದಂಡು



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಉತ್ತರ ಕರ್ನಾಟಕದ ಜೀವನಾಡಿ ಕೃಷ್ಣಾ ನದಿಯ ಉಗಮಸ್ಥಳ ಮಹಾರಾಷ್ಟ್ರದ ಮಹಾಬಳೇಶ್ವರದಲ್ಲಿ 25ನೇ ವರ್ಷದ ನಿರಂತರ ಗಂಗಾಪೂಜೆ ಹಾಗೂ ಬಾಗಿನ ಅರ್ಪಣೆ ಕಾರ್ಯಕ್ರಮಕ್ಕಾಗಿ ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳ 100ಕ್ಕೂ ಹೆಚ್ಚು ರೈತರು, ರೈತ ಮಹಿಳೆಯರು ಹಾಗೂ ಮುಖಂಡರು ಮಂಗಳವಾರ ಮಹಾಬಳೇಶ್ವರಕ್ಕೆ ಪ್ರಯಾಣ ಬೆಳೆಸಿದರು.

ವಿಜಯಪುರ ನಗರದ ಹೊಸ ಪ್ರವಾಸಿ ಮಂದಿರದಿಂದ ಮಾಜಿ ಸಚಿವ ಎಸ್.ಕೆ. ಬೆಳ್ಳುಬ್ಬಿ ಅವರ ನೇತೃತ್ವದಲ್ಲಿ ರೈತರ ತಂಡ ವಿಶೇಷ ವಾಹನಗಳಲ್ಲಿ ಹೊರಟಿತು.

ಬುಧವಾರ ಮಹಾಬಳೇಶ್ವರದ ಪಂಚಗಂಗಾ ದೇವಸ್ಥಾನದಲ್ಲಿ ಕೃಷ್ಣಾ ಮಾತೆಗೆ ವಿಶೇಷ ಗಂಗಾಪೂಜೆ ಸಲ್ಲಿಸಿ ಬಾಗಿನ ಅರ್ಪಿಸಲಿದ್ದಾರೆ.

ಉತ್ತರ ಕರ್ನಾಟಕದಲ್ಲಿ ಮಳೆ ಕೊರತೆಯಿದ್ದರೂ ಪ್ರತಿವರ್ಷ ಮಹಾರಾಷ್ಟ್ರದ ಪಶ್ಚಿಮ ಘಟ್ಟಗಳಲ್ಲಿ ಸು-ರಿಯುವ ಮಳೆಯಿಂದ ಕೃಷ್ಣಾ ನದಿ ತುಂಬಿ ಹ-ರಿದು ವಿಜಯಪುರ, ಬಾಗಲಕೋಟೆ, ಯಾದಗಿರಿ, ಕಲಬುರಗಿ ಹಾಗೂ ರಾಯಚೂರು ಜಿಲ್ಲೆಗಳ ಜನರು ಮತ್ತು ರೈತರ ಬದುಕಿಗೆ ಜೀವಜಲ ಒದಗಿಸುತ್ತಿದೆ.

ಈ ಹಿನ್ನೆಲೆಯಲ್ಲಿ ಕೃಷ್ಣಾ ಮಾತೆಯ ಮೇಲಿನ ಕೃತಜ್ಞತೆಯ ಸಂಕೇತವಾಗಿ ಕಳೆದ 25 ವರ್ಷಗಳಿಂದ ಈ ಪೂಜೆ ನಿರಂತರವಾಗಿ ನಡೆಯುತ್ತಿದೆ.

ಈ ವರ್ಷದ ಯಾತ್ರೆಯಲ್ಲಿ ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ಜಿ.ಡಿ. ಅಂಗಡಿ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಬಿರಾದಾರ್, ರಾಮಣ್ಣ ಬಾಟಿ, ವಿಜಯ ಪೂಜಾರಿ, ಶ್ರೀಶೈಲ್ ಒಡಗಲ್, ಅಶೋಕ್ ಗಿಡ್ಡಪಗೋಳ, ಶೇಕು ಗಾಣಿಗೇರ್, ಆನಂದ ಬಿಸ್ಟಗೊಂಡ, ಈರಪ್ಪ ಜಿದ್ದಿಬಾಗಿಲ, ಪುಟ್ಟು ತೇಲಿ, ಶ್ರೀಮತಿ ಕಸ್ತೂರಿ ಬೆಳ್ಳುಬ್ಬಿ, ಶ್ರೀಮತಿ ರೇಣುಕಾ ಅಂಥನಿ, ಮಲ್ಲು ಕಲಾದಗಿ, ವಿಜಯ ಪೂಜಾರ, ಆನಂದ ಬಿಷ್ಟಗೊಂಡ, ಸೇರಿದಂತೆ 100ಕ್ಕೂ ಹೆಚ್ಚು ರೈತರು ಹಾಗೂ ಮಹಿಳೆಯರು ಪಾಲ್ಗೊಂಡಿದ್ದಾರೆ. ನೆರೆ ರಾಜ್ಯ ಮಹಾರಾಷ್ಟ್ರದ ಸಾತಾರ ಜಿಲ್ಲೆಯ ಮಹಾಬಳೇಶ್ವರದಲ್ಲಿರುವ ಪಂಚಗಂಗಾ ಕ್ಷೇತ್ರವು ಕೃಷ್ಣಾ ಸೇರಿದಂತೆ ಐದು ನದಿಗಳ ಉಗಮಸ್ಥಳವಾಗಿ ಪ್ರಸಿದ್ಧಿ ಪಡೆದಿದೆ. ಇದೇ ಪವಿತ್ರ ಕ್ಷೇತ್ರದಲ್ಲಿ ಬುಧವಾರ ವಿಶೇಷ ಪೂಜೆ, ಗಂಗಾಪೂಜೆ ಹಾಗೂ ಬಾಗಿನ ಅರ್ಪಣೆ ನೆರವೇರಲಿದ್ದು, ಉತ್ತರ ಕರ್ನಾಟಕದ ಸಮೃದ್ಧಿ, ಉತ್ತಮ ಮಳೆ ಹಾಗೂ ರೈತರ ಸುಭಿಕ್ಷಕ್ಕಾಗಿ ಪ್ರಾರ್ಥನೆ ಸಲ್ಲಿಸಲಾಗುತ್ತದೆ.

## ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಸಂಭ್ರಮದ ಯುವ ಸೌರಭ | ಜಿಲ್ಲಾಧಿಕಾರಿ ಡಾ. ಆನಂದ.ಕೆ ಸಲಹೆ

# ಯುವಜನತೆ ಯಶಸ್ಸಿಗಾಗಿ ಒತ್ತಡ ನಿರ್ವಹಣೆ ರೂಢಿಸಿಕೊಳ್ಳಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ನಾಡಿನ ಪಾರಂಪರಿಕ ಕಲೆ, ಜಾನಪದ ಹಾಗೂ ರಂಗಭೂಮಿ ಕಲೆಯನ್ನು ಮುಂದಿನ ಪೀಳಿಗೆಗೆ ಉಳಿಸಿ ಬೆಳೆಸುವಲ್ಲಿ ಯುವಜನತೆಯ ಪಾತ್ರ ಮಹತ್ತರವಾದದ್ದು. 'ಯುವ ಸೌರಭ'ದಂತಹ ವೇದಿಕೆಗಳು ಗ್ರಾಮೀಣ ಹಾಗೂ ಉದಯೋನ್ಮುಖ ಕಲಾವಿದ-ರಿಗೆ ಸೂಕ್ತ ಪ್ರೋತ್ಸಾಹ ನೀಡಲಿವೆ ಎಂದು ಜಿಲ್ಲಾಧಿಕಾರಿ ಡಾ. ಆನಂದ.ಕೆ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಸ್ಥಳೀಯ ಯುವ ಪ್ರತಿಭೆಗಳನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ನಗರದ ನವಭಾಗದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಭಾಂಗಣದಲ್ಲಿ ಸೋಮವಾರ ಆಯೋಜಿಸಲಾಗಿದ್ದ 'ಯುವ ಸೌರಭ' ಸಾಂಸ್ಕೃತಿಕ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಂದಿನ ಯುವಪೀಳಿಗೆಯು ದೇಶದ ಸಂಸ್ಕೃತಿ, ಕಲೆ ಮತ್ತು ಜಾನಪದ ಪರಂಪರೆಯನ್ನು ಮುಂದುವ-ರಿಸಿಕೊಂಡು ಹೋಗುವಲ್ಲಿ ಇಂತಹ ವೇದಿಕೆಗಳು ಪ್ರಮುಖ ಪಾತ್ರ ವಹಿಸುತ್ತವೆ. ಯುವಕರು ವ್ಯಾಸಂಗದ ಜೊತೆಗೆ ಸಾಂಸ್ಕೃತಿಕ ರಂಗದಲ್ಲೂ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು ಎಂದು ಕರೆ ನೀಡಿದ ಜಿಲ್ಲಾಧಿಕಾರಿಗಳು, ಪ್ರಸ್ತುತ ವಿದ್ಯಾರ್ಥಿಗಳ ಮೇಲೆ ಸಮಾಜ ಹಾಗೂ ಕುಟುಂಬದ ನಿರೀಕ್ಷೆಗಳು ಹೆಚ್ಚಿರುವುದರಿಂದ ಯಶಸ್ವಿ ಜೀವನಕ್ಕೆ ಗಮನ ಕೇಂದ್ರೀಕರಿಸುವುದು ಮತ್ತು ಒತ್ತಡ ನಿರ್ವಹಣೆ ಕಲಿಯುವುದು ಅತ್ಯಗತ್ಯ ಎಂದರು.

ಮೊಬೈಲ್ ಫೋನ್ ಅನ್ನು ಹಿತಮಿತವಾಗಿ ಬಳಸಿ, ದೈನಂದಿನ ಓದಿನಲ್ಲಿ ಧ್ಯಾನ ಮತ್ತು ಶಿಸ್ತನ್ನು ರೂಢಿಸಿಕೊಳ್ಳಬೇಕು. ಕ್ರೀಡೆ ಹಾಗೂ ಸಾಂಸ್ಕೃತಿಕ ಚಟುವಟಿ-ಕೆಗಳಲ್ಲಿ ತೊಡಗಿಸಿಕೊಳ್ಳುವುದರಿಂದ ಹಕೆಲಸದ ಸಾಮರ್ಥ್ಯ ಹೆಚ್ಚುತ್ತದೆ. ಇದು ಸೃಜನಶೀಲತೆ ಬೆಳೆಸುತ್ತದೆ.

ವಿದ್ಯಾರ್ಥಿಗಳಿಗೆ ಯಾವುದೇ ಮಾನಸಿಕ ಒತ್ತಡವಿದ್ದರೆ ಜಿಲ್ಲಾ ಮಾನಸಿಕ ಆರೋಗ್ಯ ವಿಭಾಗದ 'ಟೆಲಿಮನಸ್'ಗೆ ಕರೆ ಮಾಡಿ ತಮ್ಮ ಸಮಸ್ಯೆಗಳನ್ನು ಹಂಚಿಕೊಳ್ಳಬಹುದು, ಇಲ್ಲಿ ಮಾಹಿತಿಯನ್ನು ಗೌಪ್ಯವಾಗಿಡಲಾಗುವುದು ಎಂದು ಅವರು ಕಿವಿಮಾತು ಹೇಳಿದರು.

ನಂತರ ನಡೆದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಯುವ ಕಲಾವಿದರು ನೀಡಿದ ಪ್ರದರ್ಶನಗಳು ಪ್ರೇಕ್ಷಕರ ಮನಸೂರೆಗೊಂಡವು.

ಕು. ಮಾಳವಿಕಾ ಮಹಿಪತಿ ಜೋಷಿ ಅವರಿಂದ ಸುಗಮ ಸಂಗೀತ ಮತ್ತು ಭಾವಗೀತೆ ಗಾಯನ, ಬಸವರಾಜ ನಾಟೇಕಾರ ಅವರಿಂದ ಜಾನಪದ ಗೀತೆಗಳು ಹಾಗೂ ಕು. ದೀಕ್ಷಾ ಬೀಸೆ ಮತ್ತು ತಂಡದವರಿಂದ ಆಕರ್ಷಕ ಸಮೂಹ ನೃತ್ಯ ಪ್ರದರ್ಶನಗೊಂಡವು.

ಅಂತೆಯೇ, ಕು. ಅಂಜನಾ ಸಂಕಣ್ಣವರ ಅಭಿನಯದ "ಹೆಣ್ಣು ಅಬಲೆ ಅಲ್ಲ ಸಬಲೆ" ನಾಟಕ ಸಭಿಕರ ಮೆಚ್ಚುಗೆಗೆ ಪಾತ್ರವಾಯಿತು. ಬಬಲೇಶ್ವರ ತಾಲೂಕಿನ ಸಾರವಾಡದ ಮುಬಾರಕ ನದಾಫ ಅವರಿಂದ 'ಗೊಂಬೆ ಕುಣಿತ' ಹಾಗೂ ಆಲಮೇಲ ತಾಲೂಕಿನ ಗುಂದಗಿಯ ಮಲ್ಲಪ್ಪ ಸೋಮನಿಂಗ ದೊಡ್ಡಮನಿ ಮತ್ತು ತಂಡದವರಿಂದ ಅದ್ದೂರಿ 'ಡೊಳ್ಳು ಕುಣಿತ' ಪ್ರದರ್ಶನಗೊಂಡವು. ಇದರೊಂದಿಗೆ ವೀರಗಾಸೆ, ಕಂಸಾಳೆ ಮತ್ತು ಯಕ್ಷಗಾನ ರೂಪಕಗಳು ಕಾರ್ಯಕ್ರಮದ ಆಕರ್ಷಣೆಯನ್ನು ದ್ವಿಗುಣಗೊಳಿಸಿದವು.

ಕಾರ್ಯಕ್ರಮದ ಕೊನೆಯಲ್ಲಿ ಭಾಗವಹಿಸಿದ ಎಲ್ಲಾ ಯುವ ಕಲಾವಿದರು ಹಾಗೂ ಕಲಾತಂಡಗಳಿಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಅಭಿನಂದನಾ ಪ್ರಮಾಣಪತ್ರಗಳನ್ನು ವಿತರಿಸಿ ಗೌರವಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಕ್ರೀಡಾಧಿಕಾರಿ ರಾಜಶೇಖರ ಧೈವಾಡಿ, ವಾರ್ತಾಧಿಕಾರಿ ಅಮರೇಶ ದೊಡಮನಿ, ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ. ಚಿದಾನಂದ ಎಸ್. ಆನೂರ, ಲಲಿತ ಕಲಾ ಅಕಾಡೆಮಿಯ ಸದಸ್ಯರಾದ ರಾಜೇಶ್ವರಿ ಮೋಪಗಾರ, ಮೋಹನ ಕಟ್ಟಿಮನಿ ಸೇ-ರಿದಂತೆ ಇಲಾಖೆಯ ಅಧಿಕಾರಿಗಳು, ವಿದ್ಯಾರ್ಥಿಗಳು, ಕಲಾಭಿಮಾನಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು.

# ನೂತನ ಪದಾಧಿಕಾರಿಗಳ ಪದಗ್ರಹಣ ಯಶಸ್ವಿ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕರ್ನಾಟಕ ಸಣ್ಣ ಮತ್ತು ಜಿಲ್ಲಾ ಸಂಪಾದಕರ ಸಂಘದ ರಾಜ್ಯ ಸಮಿತಿ ಸಭೆ ಹಾಗೂ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭವು ವಿಜಯಪುರದಲ್ಲಿ ರಾಜ್ಯಾಧ್ಯಕ್ಷ ಮಂಜುನಾಥ ಅವರ ಅಧ್ಯಕ್ಷತೆಯಲ್ಲಿ ಅತ್ಯಂತ ಯಶಸ್ವಿಯಾಗಿ ನಡೆಯಿತು.

ಸಭೆಯನ್ನು ಉದ್ದೇಶಿಸಿ ಮಾತನಾಡಿದ ರಾಜ್ಯಾಧ್ಯಕ್ಷ ಮಂಜುನಾಥ ಅವರು, ಸಂಘದ ಬೆಳವಣಿಗೆ, ಇದುವರೆಗೆ ಸಂಘ ನಡೆದು ಬಂದಿರುವ ಹಾದಿ ಹಾಗೂ ಮುಂದಿನ ದಿನಗಳಲ್ಲಿ ಕೈಗೊಳ್ಳಬೇಕಾದ ಕಾರ್ಯಕ್ರಮಗಳ ಕುರಿತು ವಿವರಿಸಿದರು.

ರಾಜ್ಯದ ಸಣ್ಣ ಮತ್ತು ಜಿಲ್ಲಾ ಪತ್ರಿಕೆಗಳ ಸಂಪಾದಕರ ಹಿತಾಸಕ್ತಿಯನ್ನು ಕಾಪಾಡುವ ಆಶಾದಾಯಕ ಸಂಘವಾಗಿ ಸಂಘವು ಬೆಳೆದಿದ್ದು, ಎಲ್ಲ ಸಂಪಾದಕರು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಿ ಸಂಘವನ್ನು ಇನ್ನಷ್ಟು ಬಲಪಡಿಸಬೇಕೆಂದು ಕರೆ ನೀಡಿದರು.

ಪ್ರತಿಯೊಂದು ಜಿಲ್ಲೆಯಲ್ಲಿ ಶೀಘ್ರದಲ್ಲೇ ಜಿಲ್ಲಾ ಘಟಕಗಳನ್ನು ರಚಿಸಿ ಸಂಘಟನೆಯನ್ನು ತಳಮಟ್ಟದಿಂದ ಸದೃಢಗೊಳಿಸುವಂತೆ ಮನವಿ ಮಾಡಿದರು.

ಸಂಘದ ಪ್ರಧಾನ ಕಾರ್ಯದರ್ಶಿ ಮೋಹನ ಕುಲಕರ್ಣಿ ಅವರು ಸಭೆಯ ಉದ್ದೇಶ ಹಾಗೂ ಸಂಘದ ಚಟುವಟಿಕೆಗಳ ಕುರಿತು ಮಾಹಿತಿ ನೀಡಿ, ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ ಸಂಪಾದಕರನ್ನು ಸ್ವಾಗತಿಸಿದರು.

ನೂತನವಾಗಿ ಆಯ್ಕೆಯಾದ ಎಲ್ಲಾ ಪದಾಧಿಕಾ-ರಿಗಳಿಗೆ ಅಭಿನಂದನೆ ಸಲ್ಲಿಸಿ, ಸಂಘದ ಅಭಿವೃದ್ಧಿಗೆ ಎಲ್ಲರ ಸಹಕಾರ ಅಗತ್ಯವೆಂದು ಹೇಳಿದರು.

ಈ ಸಂದರ್ಭದಲ್ಲಿ ಸಂಘದ ನೂತನ ರಾಜ್ಯ ಪದಾಧಿಕಾರಿಗಳನ್ನು ಅಧಿಕೃತವಾಗಿ ಪದಗ್ರಹಣಗೊಳಿಸಲಾಯಿತು.

ಕಾರ್ಯಕ್ರಮದಲ್ಲಿ ಗೌರವಾಧ್ಯಕ್ಷ ನೀಲಕಂಡ ದಾತಾರ ಹಾಗೂ ವಿಜಯಪುರ ಜಿಲ್ಲೆಯ ಸಂಪಾದಕರು ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ಅನೇಕ ಸಂಪಾದಕರು ಹಾಗೂ ಪತ್ರಕರ್ತರು ಉಪಸ್ಥಿತರಿದ್ದು, ಸಂಘದ ಬಲವರ್ಧನೆ ಹಾಗೂ ಪತ್ರಿಕಾ ಕ್ಷೇತ್ರದ ಅಭಿವೃದ್ಧಿಗೆ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸುವ ಸಂಕಲ್ಪ ವ್ಯಕ್ತಪಡಿಸಿದರು.

### ನೂತನ ಪದಾಧಿಕಾರಿಗಳು


**ರಾಜ್ಯಾಧ್ಯಕ್ಷ – ಶ್ರೀ ಮಂಜುನಾಥ (ಚಿತ್ರದುರ್ಗ), ಉಪಾಧ್ಯಕ್ಷರು– ಮುರುಘೇಶ ಬಾಬೂರಾವ್ ಶಿವಪೂಜಿ (ಬೆಳಗಾವಿ), ಆನಂದ್ ಪಿ. ಮಣ್ಣೂರು (ಕಲಬುರಗಿ), ಪ್ರಧಾನ ಕಾರ್ಯದರ್ಶಿ – ಮೋಹನ ಕುಲಕರ್ಣಿ (ವಿಜಯಪುರ), ಕಾರ್ಯದರ್ಶಿ – ರಾಜಾಸಾಬ್ ಎಂ. ಹೆಬ್ಬಳ್ಳಿ (ಗದಗ), ಖಜಾಂಚಿ – ಎಚ್.ಎಲ್. ಸುರೇಶ್ (ಬಂಗಾರಪೇಟೆ), ನಿಕಟಪೂರ್ವ ಅಧ್ಯಕ್ಷರು ಹಾಗೂ ಆಹ್ವಾನಿತ ಸದಸ್ಯರು– ಸಿದ್ದು ಸುಬೇದಾರ್ (ಕಲಬುರಗಿ)**

### ಕಾರ್ಯಕಾರಿ ಸಮಿತಿ ಸದಸ್ಯರು

**ಶ್ರೀಮತಿ ರಶ್ಮಿ ಪಾಟೀಲ (ವಿಜಯಪುರ), ವಿಜಯಕುಮಾರ ಒಡೆಯರ್ (ರಾಮನಗರ, ಬೆಂಗಳೂರು ಗ್ರಾಮಾಂತರ), ಗುರುರಾಜ್ ಕುಲಕರ್ಣಿ (ಕಲಬುರಗಿ), ಶ್ರೀಮತಿ ಡಿ.ಎನ್. ಶಾಂಭವಿ (ಹರಿಹರ, ದಾವಣಗೆರೆ), ಪಿ.ಎನ್.ಎ. ಮೊದಲಿಯಾರ್ (ಕಡೂರು, ಚಿಕ್ಕಮಗಳೂರು), ಲಕ್ಷ್ಮಣ ಎಂ. (ಶ್ರೀನಿವಾಸಪುರ, ಕೋಲಾರ) ಹಾಗೂ ರಮೇಶ್ ಭಜಂತ್ರಿ (ಗದಗ) ಅವರನ್ನು ಕಾರ್ಯಕಾರಿ ಸಮಿತಿ ಸದಸ್ಯರಾಗಿ ಘೋಷಿಸಲಾಯಿತು.**

# ಪರೀಕ್ಷಾ ನಿಯಮಗಳಿಂದ ಗ್ರಾಮೀಣ ಅಭ್ಯರ್ಥಿಗಳಿಗೆ ಅನ್ಯಾಯ

■ ಉದಯರಶ್ಮಿ ದಿನಪತ್ರಿಕೆ




ಬಾಗಲಕೋಟೆ (ಜಮಖಂಡಿ): ರಾಜ್ಯ ಸರ್ಕಾರವು ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ 15 ಸಾವಿರ ಶಿಕ್ಷಕರ ನೇಮಕಾತಿ ಪ್ರಕ್ರಿಯೆಗೆ ಚಾಲನೆ ನೀಡಿದ್ದು, 2026ರ ಕರಡು ಅಧಿಸೂಚನೆಯಲ್ಲಿ ಅಭ್ಯರ್ಥಿಗಳ ಆಯ್ಕೆಗಾಗಿ ರೂಪಿಸಿರುವ ಪರೀಕ್ಷಾ ನಿಯಮಗಳು ಗ್ರಾಮೀಣ ಭಾಗದ ಅಭ್ಯರ್ಥಿಗಳಿಗೆ ಅನ್ಯಾಯವಾಗುವ ಸಾಧ್ಯತೆ ಇದೆ ಎಂದು ಆರೋಪಿಸಿ, ಪತ್ರಿಕೆ-3ರಲ್ಲಿ ಇಂಗ್ಲಿಷ್ ಭಾಷೆಯಲ್ಲಿ 50 ಅಂಕಗಳಿಗೆ ವಿವರಣಾತ್ಮಕ ಉತ್ತರ ಬರೆಯುವುದನ್ನು ಕಡ್ಡಾಯಗೊಳಿಸಿರುವ ನಿಯಮವನ್ನು ಕೂಡಲೇ ಹಿಂಪಡೆಯುವಂತೆ ಕರ್ನಾಟಕ ಪ್ರೆಸ್ ಕ್ಲಬ್ ಜಮಖಂಡಿ ಘಟಕದ ಅಧ್ಯಕ್ಷ ಕೇದಾರಪ್ಪ ರಾವಳೋಜಿ ಅವರು ಉಪ ವಿಭಾಗಾಧಿಕಾ-ರಿಗಳ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ನಗರದ ಮಿನಿ ವಿಧಾನಸೌಧದಲ್ಲಿ ಮನವಿ ಸಲ್ಲಿಸಿದ ಬಳಿಕ ಮಾತನಾಡಿದ ಅವರು, ಸರ್ಕಾರವು ಪ್ರಾಥಮಿಕ ಶಾಲಾ ಶಿಕ್ಷಕರು, ಪದವೀಧರ ಪ್ರಾಥ-ಮಿಕ ಶಾಲಾ ಶಿಕ್ಷಕರು, ದೈಹಿಕ ಶಿಕ್ಷಣ ಶಿಕ್ಷಕರು, ಗಣಕ ವಿಜ್ಞಾನ ಶಿಕ್ಷಕರು ಹಾಗೂ ಪ್ರೌಢಶಾಲಾ ಸಹ ಶಿಕ್ಷಕರ ನೇಮಕಾತಿಗೆ ಸಂಬಂಧಿಸಿದಂತೆ ಕರಡು ಅಧಿಸೂಚನೆ ಪ್ರಕಟಿಸಿದ್ದು, ಅಭ್ಯರ್ಥಿಗಳ ಆಯ್ಕೆಗಾಗಿ ಒಟ್ಟು 400 ಅಂಕಗಳ ಮೂರು ಪತ್ರಿಕೆಗಳನ್ನು ಬರೆಯುವಂತೆ ನಿಯಮ ರೂಪಿಸಿದೆ. ಆದರೆ ಮೂರನೇ ಪತ್ರಿಕೆಯನ್ನು ಭಾಷಾ ಪ್ರಾವೀಣ್ಯತೆಗೆ ಮೀಸಲಿಟ್ಟು, ಅದರಲ್ಲಿ 50 ಅಂಕಗಳ ಕನ್ನಡ ಹಾಗೂ 50 ಅಂಕಗಳ ಇಂಗ್ಲಿಷ್ ಭಾಷೆಯಲ್ಲಿ ವಿವರಣಾತ್ಮಕ ಉತ್ತರ ಬರೆಯುವುದನ್ನು ಕಡ್ಡಾಯಗೊಳಿಸಲಾಗಿದೆ ಎಂದು ತಿಳಿಸಿದರು.

ಗ್ರಾಮೀಣ ಪ್ರದೇಶದಲ್ಲಿ ಕನ್ನಡ ಮಾಧ್ಯಮದಲ್ಲಿ ವಿದ್ಯಾಭ್ಯಾಸ ಮಾಡಿದ ಸಾವಿರಾರು ಅಭ್ಯರ್ಥಿಗಳಿಗೆ ಇಂಗ್ಲಿಷ್ ಭಾಷೆಯಲ್ಲಿ 50 ಅಂಕಗಳ ವಿವರಣಾತ್ಮಕ ಉತ್ತರ ಬರೆಯುವುದು ಅತ್ಯಂತ ಕಷ್ಟಕರವಾಗಿದ್ದು, ಇದರಿಂದ ಅರ್ಹ ಅಭ್ಯರ್ಥಿಗಳು ಶಿಕ್ಷಕರ ಹುದ್ದೆಯಿಂದ ವಂಚಿತರಾಗುವ ಸಾಧ್ಯತೆ ಇದೆ. ಸರ್ಕಾರವು ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ಈ ನಿಯಮವನ್ನು ತಕ್ಷಣವೇ ತಿದ್ದುಪಡಿ ಮಾಡಬೇಕು ಎಂದು ಆಗ್ರಹಿಸಿದರು.

**ಅನ್ಯಾಯ ಸರಿಪಡಿಸಲು ಪ್ರೆಸ್ ಕ್ಲಬ್ ಜಮಖಂಡಿ ಘಟಕದ ಅಧ್ಯಕ್ಷ ಕೇದಾರಪ್ಪ ರಾವಳೋಜಿ ಮನವಿ**

ಪತ್ರಿಕೆ-3 ಅನ್ನು ಸಂಪೂರ್ಣವಾಗಿ ರದ್ದುಪಡಿಸಬೇಕು. ಒಂದು ವೇಳೆ ಅದನ್ನು ಮುಂದುವ-ರಿಸುವುದಾದರೆ, ಇಂಗ್ಲಿಷ್ ಭಾಷೆಯ 50 ಅಂಕಗಳ ಬದಲಿಗೆ 100 ಅಂಕಗಳ ಕನ್ನಡ ಭಾಷಾ ಪರೀಕ್ಷೆಯನ್ನು ಜಾರಿಗೆ ತರಬೇಕು. ಇದರಿಂದ ಗ್ರಾಮೀಣ ಹಾಗೂ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆ ನ್ಯಾಯ ದೊರೆಯಲಿದೆ ಎಂದು ಹೇಳಿದರು.

ಒಂದರಿಂದ ಐದನೇ ತರಗತಿ ಶಿಕ್ಷಕರ ಅಭ್ಯರ್ಥಿಗಳಿಗೆ ಆತಂಕ: ಸುಮಾರು 17 ವರ್ಷಗಳ ಬಳಿಕ ಸರ್ಕಾರವು ಒಂದರಿಂದ ಐದನೇ ತರಗತಿ ಶಿಕ್ಷಕರ ನೇಮಕಾತಿಗೆ ಮುಂದಾಗಿರುವುದು ಸ್ವಾಗತಾರ್ಹವಾದರೂ, ಕರಡು ಅಧಿಸೂಚನೆಯಲ್ಲಿ ಭಾಷಾ ಶಿಕ್ಷಕರ ಅರ್ಹತೆಗೆ ಪಿಯುಸಿಯಲ್ಲಿ ಕನ್ನಡ ವಿಷಯಕ್ಕೆ 50 ಅಂಕಗಳು ಹಾಗೂ ಇಂಗ್ಲಿಷ್ ವಿಷಯಕ್ಕೂ 50 ಅಂಕಗಳನ್ನು ಕಡ್ಡಾಯಗೊಳಿಸಿರುವುದು ಸಾವಿರಾರು ಅಭ್ಯರ್ಥಿಗಳಲ್ಲಿ ಆತಂಕ ಮೂಡಿಸಿದೆ ಎಂದು ಕೇದಾರಪ್ಪ ರಾವಳೋಜಿ ತಿಳಿಸಿದರು.

ಇಂಗ್ಲಿಷ್ ವಿಷಯದ 50 ಅಂಕಗಳ ಕಡ್ಡಾಯ ನಿಯಮವನ್ನು ಕೈಬಿಟ್ಟು, ಪಿಯುಸಿ ಪರೀಕ್ಷೆಯಲ್ಲಿ ಪಡೆದ ಒಟ್ಟು ಶೇಕಡಾ 50ರಷ್ಟು ಅಂಕಗಳನ್ನು ಪರಿಗಣಿಸಿ ಅರ್ಹತೆ ನಿಗದಿಪಡಿಸಬೇಕು. ಅಲ್ಲದೆ ರಾಜ್ಯದ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಸುಮಾರು 2,500 ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳನ್ನೂ ಕೂಡಲೇ ಭರ್ತಿ ಮಾಡುವಂತೆ ಸರ್ಕಾರಕ್ಕೆ ಮನವಿ ಮಾಡಿದರು.

ಮನವಿ ಸಲ್ಲಿಸುವ ಸಂದರ್ಭದಲ್ಲಿ ಕರ್ನಾಟಕ ಪ್ರೆಸ್ ಕ್ಲಬ್ ಗೌರವಾಧ್ಯಕ್ಷ ರಾಜಕುಮಾರ್ ಪಾಟೀಲ್, ಉಪಾಧ್ಯಕ್ಷ ಭರತೇಶ್ ಪಾನಕನ್ನವರ, ಸಂಘಟನಾ ಕಾರ್ಯದರ್ಶಿ ಗುಲಾಬ್ ತೇರದಾಳ ಸೇರಿದಂತೆ ಇನ್ನಿತರ ಪದಾಧಿಕಾರಿಗಳು ಉಪಸ್ಥಿತರಿದ್ದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR